ದಾವಣಗೆರೆಯಿಂದ

ಮುಂಜಾನೆಯ ಮೆರಗು

ಸಂಪಾದಕ: ರವಿಕುಮಾರ ಜೆ.ಓ

MUNJANEYA MERAGU

ಕನ್ನಡ ದಿನಪತ್ರಿಕೆ

Editor : RAVIKUMARA J.O.

Kannada Daily

Davangere **Volume :**1 **Issue:** 113 Monday **19-10-2026 PRGI. NO. KNKAN/26/A4616,** Mob:- 8880222429 Page : 4 **Price :** 2-00/-

ದಾವಣಗೆರೆ ಸಂಪುಟ : 1 ಸಂಚಿಕೆ : 113 ಸೋಮವಾರ **Email:** munjaneyameragu@gmail.com ಮೊ: 8880222429 ಪುಟ : 4 ಬೆಲೆ–ರೂ.2.00/–

ಬರಕ್ಕೆ ಸವಾಲೊಡ್ಡುವ ಸಜ್ಜೆ ಬೆಳೆ!

ಬರದ ನಾಡಿನಲ್ಲಿ ಸಜ್ಜೆಯ ಸಮೃದ್ಧಿ; ಕೃಷಿ ಇಲಾಖೆ ಜಾಗೃತಿ ಮೂಡಿಸುವ ಅಗತ್ಯ

“ಮುಂಜಾನೆಯ ಮೆರಗು”

ಜಗಳೂರು ಅ, 18– ಮಳೆ ಕೈ–ಕೊಟ್ಟರೂ ಕೃಷಿಯ ಮೇಲಿನ ಭರವಸೆ ಕಳೆದುಕೊಳ್ಳದ ರೈತರು, ಬರದ ನಾಡಿನಲ್ಲಿ ಸಜ್ಜೆ ಬೆಳೆಯುವ ಮೂಲಕ ಕೃಷಿ ಬದುಕಿಗೆ ಹೊಸ ಆಶಾಕಿರಣ ಮೂಡಿಸಿದ್ದಾರೆ. ಮಳೆ ಕೊರತೆ, ಹೆಚ್ಚುತ್ತಿರುವ ಬಿಸಿಲಿನ ತಾಪ ಹಾಗೂ ನೀರಿನ ಅಭಾವದ ನಡುವೆಯೂ ಕಡಿಮೆ ನೀರಿನಲ್ಲಿ ಬೆಳೆಯಬಹುದಾದ ಸಜ್ಜೆ ಕೃಷಿಯತ್ತ ಕೆಲವು ರೈತರು ಮುಖ ಮಾಡಿರುವುದು ಗಮನಾರ್ಹವಾಗಿದೆ. ಆದರೆ, ಸಜ್ಜೆ ಬೆಳೆಯುವ ರೈತರ ಸಂಖ್ಯೆ ದಿನದಿಂದ ದಿನಕ್ಕೆ ಕಡಿಮೆಯಾಗುತ್ತಿರುವ ಹಿನ್ನೆಲೆಯಲ್ಲಿ ಕೃಷಿ ಇಲಾಖೆ ಈ ಬೆಳೆಯ ಮಹತ್ವದ ಕುರಿತು ಜಾಗೃತಿ ಮೂಡಿಸಬೇಕಿದೆ.

ಬರಕ್ಕೆ ಸವಾಲೊಡ್ಡುವ ಸಜ್ಜೆ

ಜಗಳೂರು ತಾಲೂಕು ಮಳೆ ಆಶ್ರಿತ ಕೃಷಿ ಪ್ರದೇಶವಾಗಿದ್ದು, ಇಲ್ಲಿನ ಬಹುತೇಕ ರೈತರು ಮುಂಗಾರು ಮಳೆಯನ್ನೇ ಅವಲಂಬಿಸಿದ್ದಾರೆ. ಮಳೆ ಕೈಕೊಟ್ಟ–ರೆ ಮೆಕ್ಕೆಜೋಳ, ರಾಗಿ, ಶೇಂಗಾ ಸೇರಿದಂತೆ ವಿವಿಧ ಬೆಳೆಗಳು ಒಣಗುವ ಆತಂಕ ಎದುರಾಗುತ್ತದೆ. ಇಂತಹ ಪರಿಸ್ಥಿತಿಯಲ್ಲಿ ಕಡಿಮೆ ನೀರಿನಲ್ಲಿಯೂ ಬೆಳೆಯುವ ಸಾಮರ್ಥ್ಯ ಹೊಂದಿರುವ ಸಜ್ಜೆ, ರೈತರಿಗೆ ಪರ್ಯಾಯ ಬೆಳೆಯಾಗಿ ನೆರವಾಗಬಲ್ಲದು.

ತಾಲೂಕಿನ ಕಸಬಾ, ಸೊಕ್ಕೆ ಹಾಗೂ ಬಿಳಿಚೋಡು ಭಾಗದ ಕೆಲವು ರೈತರು ತಮ್ಮ ಜಮೀನುಗಳ ಸುತ್ತಲೂ ಸಜ್ಜೆ ಬೆಳೆದಿದ್ದರೆ, ಇನ್ನು ಕೆಲವರು ಎಕರೆಗಟ್ಟಲೆ ಬಿತ್ತನೆ ಮಾಡಿದ್ದಾರೆ. ಮಳೆಯ ಅನಿಶ್ಚಿತತೆಯ ನಡುವೆಯೂ ಸಜ್ಜೆ ಕೃಷಿಯ ಮೂಲಕ ಉತ್ತಮ ಫಸಲಿನ ನಿರೀಕ್ಷೆಯಲ್ಲಿದ್ದಾರೆ.



ಆದರೆ, ಸಜ್ಜೆ ಬೆಳೆಯುವವರ ಸಂಖ್ಯೆ ಕಡಿಮೆಯಾಗುತ್ತಿರುವುದು ಕೃಷಿ ಕ್ಷೇತ್ರದ ಗಮನ ಸೆಳೆಯಬೇಕಾದ ವಿಚಾರವಾಗಿದೆ. ಸಾಂಪ್ರದಾಯಿಕವಾಗಿ ಆಹಾರದಲ್ಲಿ ಮಹತ್ವದ ಸ್ಥಾನ ಪಡೆದಿದ್ದ ಸಜ್ಜೆ, ಇತ್ತೀಚಿನ ವರ್ಷಗಳಲ್ಲಿ ಇತರ ಬೆಳೆಗಳತ್ತ ರೈತರು ಹೆಚ್ಚು ಆಸಕ್ತಿ ತೋರುತ್ತಿರುವುದರಿಂದ ಹಿನ್ನಡೆ ಅನುಭವಿಸುತ್ತಿದೆ. ಹೀಗಾಗಿ ಸಜ್ಜೆ ಕೃಷಿಯ ಪ್ರಯೋಜನಗಳು, ಸೂಕ್ತ ತಳಿಗಳ ಆಯ್ಕೆ, ಬಿತ್ತನೆ ವಿಧಾನ ಹಾಗೂ ಬೆಳೆ ನಿರ್ವಹಣೆ ಕುರಿತು ರೈತರಿಗೆ ಮಾಹಿತಿ ನೀಡುವ ಅಗತ್ಯವಿದೆ.

ಪೌಷ್ಟಿಕಾಂಶಗಳ ಆಗರ ಸಜ್ಜೆ

ಸಜ್ಜೆ ಕೇವಲ ಬರವನ್ನು ಎದುರಿಸುವ ಬೆಳೆಯಲ್ಲ; ಪೌಷ್ಟಿಕ ಆಹಾರದ ದೃಷ್ಟಿಯಿಂದಲೂ ಮಹತ್ವದ ಧಾನ್ಯವಾಗಿದೆ. ಇದರಲ್ಲಿ ಪ್ರೋಟೀನ್, ನಾರಿನಂಶ, ಕಬ್ಬಿಣಾಂಶ, ಮೆಗ್ನೀಸಿಯಂ ಸೇರಿದಂತೆ ಹಲವು ಪೌಷ್ಟಿಕಾಂಶಗಳಿವೆ. ಸಮತೋಲಿತ ಆಹಾರದ ಭಾಗವಾಗಿ ಸಜ್ಜೆಯನ್ನು ಬಳಸುವುದರಿಂದ ದೇಹಕ್ಕೆ ಅಗತ್ಯವಾದ ಪೌಷ್ಟಿಕಾಂಶಗಳನ್ನು ಪಡೆಯಲು ನೆರವಾಗುತ್ತದೆ.

ಸಜ್ಜೆ ರೊಟ್ಟಿ, ಗಂಜಿ, ಮುದ್ದೆ, ದೋಸೆ ಸೇರಿದಂತೆ ವಿವಿಧ ಆಹಾರ ಪದಾರ್ಥಗಳನ್ನು ತಯಾರಿಸಬಹುದು. ಹಿಂದಿನ ಕಾಲದಲ್ಲಿ ಗ್ರಾಮೀಣ ಜನರ ದೈನಂದಿನ ಆಹಾರದಲ್ಲಿ ಪ್ರಮುಖ ಸ್ಥಾನ ಪಡೆದಿದ್ದ ಸಜ್ಜೆ, ಈಗ ಆರೋಗ್ಯದ ಬಗ್ಗೆ ಕಾಳಜಿ ವಹಿಸುವವರ ಗಮನವನ್ನೂ ಸೆಳೆಯುತ್ತಿದೆ.

ಸಿರಿಧಾನ್ಯಗಳ ಮಹತ್ವದ ಕುರಿತು ಜನರಲ್ಲಿ ಅರಿವು ಹೆಚ್ಚಾದಂತೆ ಸಜ್ಜೆಯ ಬಳಕೆಯನ್ನೂ ವಿಸ್ತರಿಸಲು ಅವಕಾಶವಿದೆ. ಸ್ಥಳೀಯವಾಗಿ ಬೆಳೆಯುವ ಸಜ್ಜೆಯನ್ನು ಸ್ಥಳೀಯ ಆಹಾರ ಪದ್ಧತಿಯಲ್ಲಿ ಹೆಚ್ಚು ಬಳಸುವ ಮೂಲಕ ರೈತರಿಗೆ ಮಾರುಕಟ್ಟೆ ಸೃಷ್ಟಿಸುವುದರ ಜತೆಗೆ ಪೌಷ್ಟಿಕ ಆಹಾರ ಪದ್ಧತಿಗೂ ಉತ್ತೇಜನ ನೀಡಬಹುದು.

ರೈತರಿಗೆ ಆರ್ಥಿಕ ಭರವಸೆ

ನೀರಾವರಿ ಸೌಲಭ್ಯವಿಲ್ಲದ ರೈತರಿಗೆ ಸಜ್ಜೆ ಕೃಷಿ ಪರ್ಯಾಯ ಆದಾಯದ ಮೂಲವಾಗುವ ಸಾಧ್ಯತೆಯಿದೆ. ಕಡಿಮೆ ನೀರಿನ ಅಗತ್ಯ, ಸ್ಥಳೀಯ ಹವಾಮಾನಕ್ಕೆ ಹೊಂದಿಕೊಳ್ಳುವ ಸಾಮರ್ಥ್ಯ ಹಾಗೂ ಆಹಾರ ಧಾನ್ಯವಾಗಿ ಹೊಂದಿರುವ ಮಹತ್ವ ಈ ಬೆಳೆಯ ಪ್ರಮುಖ ಲಕ್ಷಣಗಳಾಗಿವೆ.

ಆದರೆ, ಸಜ್ಜೆ ಬೆಳೆಯುವುದರಿಂದ ರೈತರಿಗೆ ಆರ್ಥಿಕ ಲಾಭ ದೊರೆಯಬೇಕಾದರೆ ಗುಣಮಟ್ಟದ ಬೀಜ, ಸೂಕ್ತ ತಳಿಗಳ ಆಯ್ಕೆ, ವೈಜ್ಞಾನಿಕ ಕೃಷಿ ಪದ್ಧತಿ ಹಾಗೂ ಮಾರುಕಟ್ಟೆಯಲ್ಲಿ ನ್ಯಾಯಯುತ ಬೆಲೆ ಸಿಗಬೇಕು. ಸಜ್ಜೆಯನ್ನು ಖರೀದಿಸುವ ವ್ಯವಸ್ಥೆ, ಸಂಸ್ಕರಣಾ ಘಟಕಗಳು ಮತ್ತು ಮೌಲ್ಯವರ್ಧಿತ ಉತ್ಪನ್ನಗಳ ತಯಾರಿ–ಕೆಗೆ ಉತ್ತೇಜನ ನೀಡಿದರೆ ರೈತರಿಗೆ ಹೊಸ ಅವಕಾಶಗಳು ಸೃಷ್ಟಿಯಾಗಬಹುದು.

ಕೃಷಿ ಇಲಾಖೆ ಜಾಗೃತಿ ಮೂಡಿಸಲಿ

ಹವಾಮಾನ ಬದಲಾವಣೆ ಹಾಗೂ ಮಳೆಯ ಅನಿಶ್ಚಿತತೆ ಕೃಷಿ ಕ್ಷೇತ್ರಕ್ಕೆ ಸವಾಲಾಗಿರುವ ಸಂದರ್ಭದಲ್ಲಿ ಕಡಿಮೆ ನೀರಿನಲ್ಲಿ ಬೆಳೆಯಬಹುದಾದ ಸಿರಿಧಾನ್ಯಗಳ ಕೃಷಿಗೆ ಹೆಚ್ಚಿನ ಆದ್ಯತೆ ನೀಡಬೇಕಿದೆ.

ಕೃಷಿ ಇಲಾಖೆಯ ಅಧಿಕಾರಿಗಳು ಗ್ರಾಮಮಟ್ಟದಲ್ಲಿ ರೈತರಿಗೆ ಸಜ್ಜೆ ಕೃಷಿಯ ಮಹತ್ವ ತಿಳಿಸಬೇಕು. ಪ್ರಾತ್ಯಕ್ಷಿಕೆ, ಕ್ಷೇತ್ರೋತ್ಸವ, ರೈತ ಸಂಪರ್ಕ ಸಭೆ ಹಾಗೂ ತರಬೇತಿ ಕಾರ್ಯಕ್ರಮಗಳ ಮೂಲಕ ಸಜ್ಜೆ ಬೆಳೆಯುವ ವಿಧಾನ, ಬೀಜದ ಆಯ್ಕೆ, ಕೀಟಬಾಧೆ ನಿರ್ವಹಣೆ ಮತ್ತು ಮಾರುಕಟ್ಟೆ ಅವಕಾಶಗಳ ಕುರಿತು ಮಾಹಿತಿ ನೀಡಬೇಕು. ಅರ್ಹ ರೈತರಿಗೆ ದೊರೆಯುವ ಯೋಜನೆಗಳು ಮತ್ತು ಸೌಲಭ್ಯಗಳ ಬಗ್ಗೆಯೂ ಅರಿವು ಮೂಡಿಸಬೇಕು.

ಸಿರಿಧಾನ್ಯ ಕೃಷಿಗೆ ಉತ್ತೇಜನ ಅಗತ್ಯ

ಬರದ ನಾಡಿನಲ್ಲಿ ಸಜ್ಜೆ ಕೃಷಿ ಕೇವಲ ಪರ್ಯಾಯ ಬೆಳೆಯ ಆಯ್ಕೆಯಲ್ಲ; ಅದು ನೀರಿನ ಮಿತವ್ಯಯ, ಪೌಷ್ಟಿಕ ಆಹಾರ ಮತ್ತು ಸುಸ್ಥಿರ ಕೃಷಿಯತ್ತ ಸಾಗುವ ಹೆಜ್ಜೆಯಾಗಿದೆ. ಸಜ್ಜೆ ಬೆಳೆಯುವ ರೈತರ ಸಂಖ್ಯೆ ಕುಸಿಯುತ್ತಿರುವ ಹಿನ್ನೆಲೆಯಲ್ಲಿ ಕೃಷಿ ಇಲಾಖೆ ಈ ಬೆಳೆಯ ಮಹತ್ವವನ್ನು ಜನರಿಗೆ ತಿಳಿಸುವ ಜತೆಗೆ ರೈತರಿಗೆ ಅಗತ್ಯ ಪ್ರೋತ್ಸಾಹ ನೀಡಬೇಕು. ಗುಣಮಟ್ಟದ ಬೀಜ, ತಾಂತ್ರಿಕ ಮಾರ್ಗದರ್ಶನ ಹಾಗೂ ಸೂಕ್ತ ಮಾರುಕಟ್ಟೆ ವ್ಯವಸ್ಥೆ ಕಲ್ಪಿಸಿದರೆ ಸಜ್ಜೆ ಕೃಷಿಯ ವಿಸ್ತರಣೆಗೆ ನೆರವಾಗಬಹುದು.

ಚಿರಂಜೀವಿ, ರೈತ ಸಂಘದ ತಾಲೂಕು ಅಧ್ಯಕ್ಷರು (ಹುಚ್ಚವ್ವನಹಳ್ಳಿ ಮಂಜುನಾಥ ಬಣ)



ಬರದ ನಡುವೆಯೂ ಸಜ್ಜೆ ಬೆಳೆದಿರುವ ರೈತರ ಪ್ರಯತ್ನಕ್ಕೆ ಸೂಕ್ತ ಬೆಲೆ ಹಾಗೂ ಪ್ರೋತ್ಸಾಹ ದೊರೆಯಬೇಕು. ಸಜ್ಜೆ ಕೃಷಿಯ ಮಹತ್ವವನ್ನು ರೈತರಿಗೆ ಮನವರಿಕೆ ಮಾಡಿಕೊಡುವ ಮೂಲಕ ಈ ಬೆಳೆಯ ವಿಸ್ತರಣೆಗೆ ಕೃಷಿ ಇಲಾಖೆ ಮುಂದಾಗಬೇಕಿದೆ.

ಮಾರಪ್ಪ, ರೈತ

ಎನ್‌ಡಿಎ ಅಭ್ಯರ್ಥಿ ಗೆಲುವು ಸಾಧಿಸಲಿದ್ದಾರೆ ಮಾಜಿ ಶಾಸಕ ಎಚ್.ಪಿ. ರಾಜೇಶ್

“ಮುಂಜಾನೆಯ ಮೆರಗು”

ಜಗಳೂರು: ಆಗ್ನೇಯ ಪದವೀಧರ ಕ್ಷೇತ್ರದ ವಿಧಾನಪರಿಷತ್ ಚುನಾವಣೆಯಲ್ಲಿ ಎನ್‌ಡಿಎ ಅಭ್ಯರ್ಥಿ ಗೆಲುವು ಸಾಧಿಸಲಿದ್ದಾರೆ ಎಂದು ಮಾಜಿ ಶಾಸಕ ಎಚ್.ಪಿ. ರಾಜೇಶ್ ವಿಶ್ವಾಸ ವ್ಯಕ್ತಪಡಿಸಿದರು.



ಭಾನುವಾರ ತಾಲೂಕಿನ ಬಿದರ–ಕೆರೆ ಗ್ರಾಮ ಹಾಗೂ ಜಗಳೂರು ಪಟ್ಟಣದಲ್ಲಿ ಎನ್‌ಡಿಎ ಅಭ್ಯರ್ಥಿ ಕೆ.ಎಂ. ಸುರೇಶ್ ಅವರ ಪರ ಮತಯಾಚನೆ ನಡೆಸಿ ಅವರು ಮಾತನಾಡಿದರು.

ಪದವೀಧರ ಮತದಾರರು ಚುನಾವಣೆಯಲ್ಲಿ ಮಹತ್ವದ ಪಾತ್ರ ವಹಿಸಲಿದ್ದು, ಅಭ್ಯರ್ಥಿಯ ಗೆಲುವಿಗೆ ಪ್ರತಿಯೊಬ್ಬರೂ ಸಹಕರಿಸಬೇಕು. ಕ್ಷೇತ್ರದ ಅಭಿವೃದ್ಧಿ ಹಾಗೂ ಪದವೀಧರರ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡು ಎನ್‌ಡಿಎ ಅಭ್ಯರ್ಥಿಯನ್ನು ಬೆಂಬಲಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಬಿಜೆಪಿ ಮುಖಂಡರು, ಪಕ್ಷದ ಕಾರ್ಯಕರ್ತರು ಹಾಗೂ ಸ್ಥಳೀಯ ಮುಖಂಡರು ಉಪಸ್ಥಿತರಿದ್ದು, ಅಭ್ಯರ್ಥಿ ಪರ ಮತಯಾಚನೆ ನಡೆಸಿದರು.

ದಾವಣಗೆರೆಯಲ್ಲಿ ಯಡಿಯೂರಪ್ಪ, ಟಿ.ಡಿ. ಮೇಘರಾಜ್ ಅವರಿಗೆ ಕಂಬಳಿ ಗೌರವ



“ಮುಂಜಾನೆಯ ಮೆರಗು”

ಜಗಳೂರು ಅ, 18– ರಾಜ್ಯದ ಜನಪ್ರಿಯ ರೈತ ನಾಯಕರು ಹಾಗೂ ಕೃಷಿಗೆ ಪ್ರತ್ಯೇಕ ಬಜೆಟ್ ಮಂಡಿಸಿದ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಮತ್ತು ದಾವಣಗೆರೆ ಜಿಲ್ಲಾ ಪ್ರಭಾರಿಗಳೂ, ಶಿವಮೊಗ್ಗ ಜಿಲ್ಲಾ ಬಿಜೆಪಿಯ ಮಾಜಿ ಅಧ್ಯಕ್ಷರು ಹಾಗೂ ಸಾಗರ ನಗರಸಭೆಯ ಮಾಜಿ ಅಧ್ಯಕ್ಷರಾದ ಆತ್ಮೀಯ ಟಿ.ಡಿ. ಮೇಘರಾಜ್ ಅವರಿಗೆ ಹಾಲುಮತ ಸಮುದಾಯದ ಸಾಂಪ್ರದಾಯಿಕ ಸಂಕೇತವಾದ ಕಂಬಳಿಯನ್ನು ಹೊದಿಸಿ ಗೌರವಿಸಲಾಯಿತು ಎಂದು ಚಿಕ್ಕ ಉಜ್ಜಿನಿ ಆಂಜಿನಪ್ಪ ತಿಳಿಸಿದ್ದಾರೆ.

ದಾವಣಗೆರೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಜಗಳೂರಿನ ಮಾಜಿ ಶಾಸಕ ಎಸ್.ವಿ. ರಾಮಚಂದ್ರ ಅವರ ಮುಖಾಂತರ ಕಂಬಳಿ ಹೊದಿಸಿ ಸನ್ಮಾನಿಸಲಾಯಿತು.

ರಾಜ್ಯ ಮಟ್ಟದ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ ಕುರಿತು ಸಭೆ

ವಿಕಾಸಸೌಧದ ಸಭೆಯಲ್ಲಿ ಶಾಸಕ ಬಿ. ದೇವೇಂದ್ರಪ್ಪ ಭಾಗಿ

“ಮುಂಜಾನೆಯ ಮೆರಗು”

ಜಗಳೂರು ಅ, 18– 2026ನೇ ಸಾಲಿನ ರಾಜ್ಯಮಟ್ಟದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಅರ್ಥಪೂರ್ಣವಾಗಿ ಹಾಗೂ ವಿಜೃಂಭಣೆಯಿಂದ ಆಚರಿಸುವ ಸಂಬಂಧ ಬೆಂಗಳೂರಿನ ವಿಕಾಸಸೌಧದಲ್ಲಿ ನಡೆದ ಸಭೆಯಲ್ಲಿ ಜಗಳೂರು ವಿಧಾನಸಭಾ ಕ್ಷೇತ್ರದ ಶಾಸಕ ಬಿ. ದೇವೇಂದ್ರಪ್ಪ ಅವರು ಭಾಗವಹಿಸಿ, ಜಯಂತಿ ಆಚರಣೆಯ ರೂಪುರೇಷೆಗಳ ಕುರಿತು ಚರ್ಚಿಸಿದರು.

ಬೆಂಗಳೂರಿನ ವಿಕಾಸಸೌಧದ ನಾಲ್ಕನೇ ಮಹಡಿಯ 419ನೇ ಕೊಠಡಿಯಲ್ಲಿ ಪರಿಶಿಷ್ಟ ಪಂಗಡ ಕಲ್ಯಾಣ ಇಲಾಖೆಯ ಸಚಿವ ಟಿ. ರಘುಮೂರ್ತಿ ಅವರ ಅಧ್ಯಕ್ಷತೆಯಲ್ಲಿ ಸಭೆ ನಡೆಯಿತು. ಸಭೆಯಲ್ಲಿ 2026ನೇ ಸಾಲಿನ ರಾಜ್ಯಮಟ್ಟದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆಗೆ ಕೈಗೊಳ್ಳಬೇಕಾದ ಸಿದ್ಧತೆಗಳು, ಕಾರ್ಯಕ್ರಮದ ರೂಪುರೇಷೆಗಳು ಹಾಗೂ ಆಚರಣೆಯನ್ನು ಯಶಸ್ವಿಗೊಳಿಸುವ ನಿಟ್ಟಿನಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಚರ್ಚೆ ನಡೆಸಲಾಯಿತು.



ಸಭೆಯಲ್ಲಿ ಭಾಗವಹಿಸಿದ್ದ ಶಾಸಕ ಬಿ. ದೇವೇಂದ್ರಪ್ಪ ಅವರು ಮಹರ್ಷಿ ವಾಲ್ಮೀಕಿ ಅವರ ಆದರ್ಶಗಳು, ಮೌಲ್ಯಗಳು ಹಾಗೂ ಸಂದೇಶಗಳನ್ನು ಸಮಾಜದ ಎಲ್ಲ ವರ್ಗಗಳಿಗೂ ತಲುಪಿಸುವ ನಿಟ್ಟಿನಲ್ಲಿ ಜಯಂತಿ ಆಚರಣೆಗೆ ವಿಶೇಷ ಮಹತ್ವ ನೀಡಬೇಕಾದ ಅಗತ್ಯದ ಕುರಿತು ಚರ್ಚಿಸಿದರು.

ಮಹರ್ಷಿ ವಾಲ್ಮೀಕಿ ಅವರು ರಚಿಸಿದ ರಾಮಾಯಣವು ಭಾರತೀಯ ಸಂಸ್ಕೃತಿ, ಪರಂಪರೆ ಮತ್ತು ಮಾನವೀಯ ಮೌಲ್ಯಗಳಿಗೆ ಮಹತ್ವದ ಕೊಡುಗೆ ನೀಡಿದೆ. ಅವರ ಜೀವನಾದರ್ಶಗಳು ಹಾಗೂ ಚಿಂತನೆಗಳನ್ನು ಯುವಜನರಿಗೆ ಪರಿಚಯಿಸುವ ಮೂಲಕ ಸಾಮಾಜಿಕ ಜಾಗೃತಿ ಮೂಡಿಸುವುದು ಜಯಂತಿ ಆಚರಣೆಯ ಪ್ರಮುಖ ಉದ್ದೇಶವಾಗಿದೆ.

ಸಭೆಯಲ್ಲಿ ಸಮುದಾಯದ ಮುಖಂಡರು ಹಾಗೂ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದು, ರಾಜ್ಯಮಟ್ಟದ ಜಯಂತಿ ಆಚರಣೆಯ ಸಿದ್ಧತೆಗಳ ಕುರಿತು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು.

ಸುಡು ಬಿಸಿಲಿಗೆ ತಂಪೆರೆದ ವರುಣನ ಆಗಮನ!

ಕಡಲೆ ಬಿತ್ತನೆಗೆ ಭೂಮಿಯಲ್ಲಿ ಉತ್ತಮ ತೇವಾಂಶ; ರೈತರ ಮೊಗದಲ್ಲಿ ಮಂದಹಾಸ

“ಮುಂಜಾನೆಯ ಮೆರಗು”

ಜಗಳೂರು ಅ, 18– ಹಲವು ದಿನಗಳಿಂದ ಸುಡು ಬಿಸಿಲಿನ ತಾಪಕ್ಕೆ ತತ್ತರಿಸಿದ್ದ ಜನತೆಗೆ ಶನಿವಾರ ಸಂಜೆ ಸುರಿದ ಮಳೆ ತಂಪಿನ ಅನುಭವ ನೀಡಿದೆ. ಪಟ್ಟಣ ಸೇರಿದಂತೆ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಸುಮಾರು ಒಂದು ಗಂ–ಟೆ ಕಾಲ ರಭಸವಾಗಿ ಮಳೆ ಸುರಿದಿದ್ದು, ಬಿಸಿಲಿನಿಂದ ಕಂಗೆಟ್ಟಿದ್ದ ಜನರು ನಿಟ್ಟುಸಿರು ಬಿಡುವಂತಾಗಿದೆ.

ತಾಲ್ಲೂಕಿನಲ್ಲಿ ಪೂರ್ವ ಮುಂಗಾರು ಅವಧಿಯಲ್ಲಿ ಮಾತ್ರ ಮಳೆಯಾಗಿದ್ದು, ನಂತರದ ದಿನಗಳಲ್ಲಿ ನಿರೀಕ್ಷಿತ ಪ್ರಮಾಣದಲ್ಲಿ ಮಳೆಯಾಗದೆ ಬಿಸಿಲಿನ ತೀವ್ರತೆ ಹೆಚ್ಚಾಗಿತ್ತು. ಮಳೆಗಾಗಿ ಕಾಯುತ್ತಿದ್ದ ಜನರಿಗೆ ಶನಿವಾರ ಸಂಜೆ ಸುರಿದ ಮಳೆ ತುಸು ನೆಮ್ಮದಿ ತಂದಿದೆ. ಮಳೆಯ ಆಗಮನದಿಂದ ವಾತಾವರಣ ತಂಪಾಗಿದ್ದು, ಬಿಸಿಲಿನ ಬೇಗೆಯಿಂದ ಬಳಲುತ್ತಿದ್ದ ಜನರು ನಿರಾಳರಾಗಿದ್ದಾರೆ.



ಕಡಲೆ ಬಿತ್ತನೆಗೆ ಅನುಕೂಲ

ತಾಲ್ಲೂಕಿನ ಬಹುತೇಕ ಭಾಗಗಳಲ್ಲಿ ಕೃಷಿಯೇ ಜನರ ಪ್ರಮುಖ ಜೀವನಾಧಾರವಾಗಿದೆ. ಮುಂಗಾರು ಮಳೆಯ ಕೊರತೆಯಿಂದಾಗಿ ಕೃಷಿ ಚಟುವಟಿಕೆಗಳು ಹಿನ್ನಡೆ ಅನುಭವಿಸಿದ್ದವು. ಇದೀಗ ಹಿಂಗಾರು ಹಂಗಾಮಿನ ಬಿತ್ತನೆಗೆ ರೈತರು ಸಿದ್ಧತೆ ನಡೆಸುತ್ತಿದ್ದು, ಶನಿವಾರ ಸುರಿದ ಮಳೆ ಕೃಷಿ ಚಟುವಟಿಕೆಗಳಿಗೆ ಹೊಸ ಆಶಾಭಾವನೆ ಮೂಡಿಸಿದೆ.

ವಿಶೇಷವಾಗಿ ಹಿಂಗಾರು ಹಂಗಾಮಿನಲ್ಲಿ ಬೆಳೆಯುವ ಕಡಲೆ ಬಿತ್ತನೆಗೆ ಭೂಮಿಯಲ್ಲಿ ಅಗತ್ಯ ತೇವಾಂಶ ದೊರೆಯುವ ನಿರೀಕ್ಷೆ ಮೂಡಿದೆ. ಮಳೆಯಿಂದ ಭೂಮಿ ಹಸಿಯಾಗಿರುವುದರಿಂದ ತೇವಾಂಶವನ್ನು ಆಧರಿಸಿ ಬಿತ್ತನೆ ಕಾರ್ಯ ಆರಂಭಿಸಲು ರೈತರಿಗೆ ಅನುಕೂಲವಾಗಲಿದೆ. ಇದರಿಂದ ರೈತರ ಮೊಗದಲ್ಲಿ ಮಂದಹಾಸ ಮೂಡಿದ್ದು, ಉತ್ತಮ ಮಳೆಯಾಗಿ ಬೆಳೆ ಕೈಹಿಡಿಯಲಿ ಎಂಬ ಆಶಯ ವ್ಯಕ್ತವಾಗಿದೆ.

ಮುಂದಿನ ಮಳೆಯ ನಿರೀಕ್ಷೆಯಲ್ಲಿ ರೈತರು

ಜಗಳೂರು ತಾಲ್ಲೂಕು ಮಳೆಯಾಶ್ರಿತ ಕೃಷಿ ಪ್ರದೇಶವಾಗಿರುವುದರಿಂದ ಇಲ್ಲಿನ ರೈತರು ಬಹುತೇಕ ಮಳೆಯನ್ನೇ ಅವಲಂಬಿಸಿದ್ದಾರೆ. ಹಿಂಗಾರು ಹಂಗಾಮಿನಲ್ಲಿ ಉತ್ತಮ ಮಳೆಯಾದರೆ ಕಡಲೆ ಸೇರಿದಂತೆ ವಿವಿಧ ಬೆಳೆಗಳ ಬಿತ್ತನೆಗೆ ಅನುಕೂಲವಾಗಲಿದೆ. ಆದರೆ, ಒಂದೇ ಮಳೆಯಿಂದ ಸಂಪೂರ್ಣ ಕೃಷಿ ಚಟುವಟಿಕೆಗಳಿಗೆ ಸಾಕಷ್ಟು ತೇವಾಂಶ ದೊರೆಯುತ್ತದೆಯೇ ಎಂಬುದು ಮುಂದಿನ ದಿನಗಳಲ್ಲಿ ಸುರಿಯುವ ಮಳೆಯ ಪ್ರಮಾಣವನ್ನು ಅವಲಂಬಿಸಿದೆ.

ಹೀಗಾಗಿ, ಶನಿವಾರದ ಮಳೆ ರೈತರಲ್ಲಿ ಹೊಸ ಭರವಸೆ ಮೂಡಿಸಿದ್ದು, ಮುಂದಿನ ದಿನಗಳಲ್ಲಿಯೂ ಉತ್ತಮ ಮಳೆಯಾಗಿ ಹಿಂಗಾರು ಬೆಳೆಗಳು ಸಮೃದ್ಧವಾಗಿ ಬೆಳೆಯಲಿ ಎಂಬ ನಿರೀಕ್ಷೆಯಲ್ಲಿ ಅನ್ನದಾತರು ಇದ್ದಾರೆ.

Editor, Publisher & Owner of the News Paper: RAVIKUMARA J.O, MUNJANEYA MERAGU, JCR BADAVANE, Jagalur- 577-528, Davanagere (D)Karnataka, Printed by: MALLIKARJUNAPPA H G. Printed at: SHIVA MEDIA HOUSE, No.900/A2, Opp-Banashankari Temple Arch, Main Roan, Davanagere, Karnataka-577004.

ಹೆಚ್.ಐ.ವಿ ಸೋಂಕಿನ ಬಗ್ಗೆ ಜಾಗೃತಿ ಮತ್ತು ಎಚ್ಚರಿಕೆ ಅಗತ್ಯ :ಡಾ.ಗೋವಿಂದರಾಜು

"ಮುಂಜಾನೆಯ ಮೆರಗು"

ದಾವಣಗೆರೆ, ಅ.18– ಸಾರ್ವಜನಿಕರಲ್ಲಿ ಹೆಚ್ಐವಿ ಸೋಂಕಿನ ಬಗ್ಗೆ ಜಾಗೃತಿ ಮೂಡಿಸುವುದು ಮತ್ತು ಸೋಂಕು ಹರಡದಂತೆ ಎಚ್ಚರಿಕೆ ವಹಿಸುವುದು ನಮ್ಮೆಲ್ಲರ ಜವಾಬ್ದಾರಿ ಎಂದು ಆರೋಗ್ಯ ಮತ್ತುಕುಟುಂಬ ಕಲ್ಯಾಣ ಇಲಾಖೆ ಐಇಸಿ ವಿಭಾಗದ ಉಪನಿರ್ದೇಶಕರಾದ ಡಾ.ಗೋವಿಂದರಾಜು ಅವರು ಅಭಿಪ್ರಾಯಪಟ್ಟರು.

ಅವರು ಶನಿವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ರಾಜ್ಯಏಡ್ಸ್ ಪ್ರಿವೆನ್ಷನ್ ಸೊಸೈಟಿ, ಜಿಲ್ಲಾಏಡ್ಸ್ ಪ್ರತಿಬಂಧಕ ಹಾಗೂ ನಿಯಂತ್ರಣ ಘಟಕ, ಚಿಗಟೇರಿ ಜಿಲ್ಲಾಸ್ಪತ್ರೆ ವಿವಿಧ ಇಲಾಖೆಗಳ ಹಾಗೂ ವಿವಿಧ ಸಂಘ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ರಾಜ್ಯಮಟ್ಟದ 'ಮೆಗಾ ರೆಡ್‌ರಿಬ್ಬನ್ ಮ್ಯಾರಥಾನ್ ಸ್ಪರ್ಧೆ–2026' ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ರಾಜ್ಯದಲ್ಲಿ ಹೆಚ್ಐವಿ ಸೋಂಕು ತಡೆಗಟ್ಟುವಿಕೆ ಮತ್ತು ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. 17 ವಯಸ್ಸಾದಾಟಿದ ಹಾಗೂ 25 ವರ್ಷದ ಒಳಗಿನ ಯುವಕ–ಯುವತಿಯರನ್ನು ಈ ಕಾರ್ಯಕ್ರಮಕ್ಕೆ ಆಹ್ವಾನಿಸಲಾಗಿದೆ. ಯುವಜನತೆಯಲ್ಲಿ ಎಚ್ಐವಿ ಏಡ್ಸ್‌ಕುರಿತು ಸರಿಯಾದ ವೈಜ್ಞಾನಿಕ ಮಾಹಿತಿ ನೀಡುವುದು ಹಾಗೂ



ಸೋಂಕಿನಿಂದ ದೂರವಿರುವಂತೆ ಜಾಗೃತಿ ಮೂಡಿಸುವುದು ಈ ಕಾರ್ಯಕ್ರಮದ ಮುಖ್ಯಉದ್ದೇಶವಾಗಿದೆ ಎಂದು ತಿಳಿಸಿದರು.

95–95–95 ಗೋಲ್ ಎಂಬ ಮೂರು ಪ್ರಮುಖ ಗುರಿಗಳನ್ನು ಒಳಗೊಂಡ ಈ ಕಾರ್ಯಕ್ರಮವು ಮೊದಲ 95 ರಲ್ಲಿ ಜನಸಂಖ್ಯೆಯಲ್ಲಿ ಹೆಚ್ಐವಿ ಸೋಂಕಿತರಾಗಿರುವ ಶೇ. 95ರಷ್ಟು ಜನರನ್ನು ಗುರುತಿಸಿ ಪರೀಕ್ಷೆಗೆ ಒಳಪಡಿಸುವುದು. ಎರಡನೇ 95 ರಲ್ಲಿ ಸೋಂಕು ಇರುವುದು ದೃಢಪಟ್ಟವರಿಗೆ ಯಾವುದೇ ಶುಲ್ಕವಿಲ್ಲದೆ ಉಚಿತವಾಗಿ ಎ.ಆರ್.ಟಿಚಿಕಿತ್ಸೆ ನೀಡುವುದು ಹಾಗೂ ಮೂರನೇ 95 ರಲ್ಲಿ ವೈರಲ್ ಲೋಡ್‌ಅನ್ನು ಸಾವಿರಕ್ಕಿಂತ ಹೆಚ್ಚಾಗದಂತೆ ತಡೆದು, ಸೋಂಕು ಇತರರಿಗೆ ಹರಡದಂತೆ ನಿಯಂತ್ರಿಸುವುದು ಆಗಿದೆ ಎಂದರು.

ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್ಷನ್ ಸೊಸೈಟಿ ವತಿಯಿಂದ ಕೌನ್ಸಿಲಿಂಗ್, ಟೆಸ್ಟಿಂಗ್, ಚಿಕಿತ್ಸೆ ಮತ್ತು ಸಾಮಾಜಿಕ ಸೌಲಭ್ಯಗಳು ಸಂಪೂರ್ಣ ಉಚಿತವಾಗಿ ದೊರೆಯುತ್ತಿವೆ. ಹೆಚ್ಐವಿ ಸೋಂಕಿತ ವ್ಯಕ್ತಿಗಳಿಗೆ ಯಾವುದೇ ರೀತಿಯ ತಾರತಮ್ಯ ಅಥವಾ ಅವಮಾನ ಮಾಡುವುದು ಶಿಕ್ಷಾರ್ಹ ಅಪರಾಧವಾಗಿದೆ. ಇದಕ್ಕೆ 2 ವರ್ಷಜೈಲು ಮತ್ತು 1 ಲಕ್ಷ ರೂಪಾಯಿ ದಂಡ ವಿಧಿಸುವ ಅವಕಾಶವಿದೆ. ಸಮಾಜದಲ್ಲಿ ಹೆಚ್ಐವಿ ಕುರಿತು ಇರುವ ತಪ್ಪು ಕಲ್ಪನೆಗಳನ್ನು ತೊಡೆದುಹಾಕಿ, ಸೋಂಕಿತರೊಂದಿಗೆ ಮುಕ್ತವಾಗಿರಲು ಪ್ರೋತ್ಸಾಹಿಸಲಾಗುತ್ತಿದೆ ಎಂದು ತಿಳಿಸಿದರು.

ರಾಜ್ಯದಾದ್ಯಂತ ಶಾಲಾ ಕಾಲೇಜುಗಳಲ್ಲಿ ವಿವಿಧ ಜಾಗೃತಿ ಚಟುವಟಿಕೆಗಳು ಹಾಗೂ 'ಸುಮಿ' ಎಂಬ ಸ್ಪರ್ಧೆಗಳ ಮೂಲಕ ಯುವಜನತೆಯಲ್ಲಿ ಆರೋಗ್ಯ ಶಿಕ್ಷಣದ ಬಗ್ಗೆ ಹೆಚ್ಚಿನ ಅರಿವು ಮೂಡಿಸಲಾಗುತ್ತಿದೆ ಎಂದರು.

ಕಾರ್ಯಕ್ರಮಕ್ಕೂ ಮುನ್ನ ಜಿಲ್ಲಾಧಿಕಾರಿಗಳ ಕಚೇರಿಯಿಂದ ಚಿಗಟೇರಿ ಆಸ್ಪತ್ರೆಯವರಿಗೆ 'ಮೆಗಾ ರೆಡ್‌ರಿಬ್ಬನ್ ಮ್ಯಾರಥಾನ್ ಸ್ಪರ್ಧೆ–2026' ಸ್ಪರ್ಧೆಯನ್ನು ಏರ್ಪಡಿಸಲಾಗಿದ್ದು, ಸ್ಪರ್ಧೆಯಲ್ಲಿ ಬಾಲಕರ ವಿಭಾಗದಿಂದ ಉಡುಪಿಯ ಬಾಲು ಹೆಗ್ಡೆ ಪ್ರಥಮ ಸ್ಥಾನ, ಮೈಸೂರಿನ ಪುರುಷೋತ್ತಮ ದ್ವಿತೀಯ ಸ್ಥಾನ, ಉಡುಪಿಯ ಚನ್ನಬಸವ ಅವರುತೃತೀಯ ಸ್ಥಾನ ಹಾಗೂ ಹರೀಶ್, ಪ್ರಕಾಶ್, ಪ್ರತೀಕ್‌ಅವರು ಸಮಾಧಾನಕರ ಬಹುಮಾನ ಮತ್ತು ಬಾಲಕಿಯರ ವಿಭಾಗದಲ್ಲಿ ಉಡುಪಿಯ ನಂದಿನಿ ಪ್ರಥಮ ಸ್ಥಾನ, ದಕ್ಷಿಣ ಕನ್ನಡದ ಶ್ರೇಯಾ ದ್ವಿತೀಯ ಸ್ಥಾನ, ಉಡುಪಿಯ ದೀಕ್ಷಿತ್ ತೃತೀಯ ಸ್ಥಾನ ಅಶ್ವಿನಿ, ಐಸಿರಿ ಮತ್ತು ಬಿಂದು ಸಮಾಧಾನಕರ ಬಹುಮಾನ ಪಡೆದರು.

ಜಿಲ್ಲಾ ಆರೋಗ್ಯ ಮತ್ತುಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ. ಮಧುಕೆ. ಎಸ್. , ಅಧೀಕ್ಷಕರಾದಡಾ. ನಾಗೇಂದ್ರಪ್ಪ ಎಂ.ಡಾ.ಮುರಳೀಧರ್, ಡಾ.ನಂಜೇಗೌಡ, ಡಾ.ಪಂಪಾಪತಿ, ದಾವಣಗೆರೆ ಪ್ರಥಮ ದರ್ಜೆ ಕಾಲೇಜಿನ ಲೋಕೇಶ್ ನಾಯಕ್ ಸೇರಿದಂತೆ ವಿವಿಧ ಜಿಲ್ಲೆಗಳ ವಿದ್ಯಾರ್ಥಿಗಳು ಮತ್ತು ಇತರರು ಉಪಸ್ಥಿತರಿದ್ದರು.

ಶಶಿ ಹುಲಿಕುಂಟೆಮಠ ಪರ ಸಚಿವ ಕೆ.ಎಸ್. ಬಸವಂತಪ್ಪ ಮತಯಾಚನೆ

"ಮುಂಜಾನೆಯ ಮೆರಗು"

ದಾವಣಗೆರೆ ಅ, 18– ಆಗ್ನೇಯ ಪದವೀಧರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆಗೆ ಸಂಬಂಧಿಸಿದಂತೆ ಕಾಂಗ್ರೆಸ್ ಅಭ್ಯರ್ಥಿ ಶಶಿ ಹುಲಿಕುಂಟೆಮಠ ಅವರ ಪರವಾಗಿ ಸಚಿವ ಕೆ.ಎಸ್. ಬಸವಂತಪ್ಪ ಅವರು ದಾವಣಗೆರೆ ಜಿಲ್ಲೆಯ ಮಾಯಕೊಂಡ ವಿಧಾನಸಭಾ ಕ್ಷೇತ್ರದ ಬಾಡ ಗ್ರಾಮದಲ್ಲಿ ಚುನಾವಣಾ ಪ್ರಚಾರ ನಡೆಸಿ ಪದವೀಧರ ಮತದಾರರಲ್ಲಿ ಮತಯಾಚಿಸಿದರು.



ಬಾಡ ಗ್ರಾಮದ ಶ್ರೀ ಕರಿಯಮ್ಮ ಸಮುದಾಯ ಭವನದಲ್ಲಿ ಆಯೋಜಿಸಲಾಗಿದ್ದ ಪ್ರಚಾರ ಸಭೆಯಲ್ಲಿ ಭಾಗವಹಿಸಿದ ಸಚಿವರು, ಕಾಂಗ್ರೆಸ್ ಅಭ್ಯರ್ಥಿ ಶಶಿ ಹುಲಿಕುಂಟೆಮಠ ಅವರನ್ನು ಬೆಂಬಲಿಸುವಂತೆ ಪದವೀಧರ ಮತದಾರರಲ್ಲಿ ಮನವಿ ಮಾಡಿದರು. ಆಗ್ನೇಯ ಪದವೀಧರ ಕ್ಷೇತ್ರದ ಚುನಾವಣೆಯ ಹಿನ್ನೆಲೆಯಲ್ಲಿ ಪಕ್ಷದ ಅಭ್ಯರ್ಥಿಯ ಪರವಾಗಿ ಮತದಾರರನ್ನು ಸಂಪರ್ಕಿಸಿ, ಚುನಾವಣಾ ಪ್ರಚಾರವನ್ನು ಕೈಗೊಳ್ಳುವ ಕುರಿತು ಮುಖಂಡರು ಹಾಗೂ ಕಾರ್ಯಕರ್ತರೊಂದಿಗೆ ಸಮಾಲೋಚನೆ ನಡೆಸಿದರು.

ಪದವೀಧರ ಮತದಾರರೊಂದಿಗೆ ಸಮಾಲೋಚನೆ

ವಿಧಾನ ಪರಿಷತ್ ಚುನಾವಣೆಯಲ್ಲಿ ಪದವೀಧರ ಮತದಾರರ ಪಾತ್ರ ಮಹತ್ವದ್ದಾಗಿದ್ದು, ಅಭ್ಯರ್ಥಿಯ ಪರವಾಗಿ ಮತದಾರರನ್ನು ತಲುಪುವ ಉದ್ದೇಶದಿಂದ ಸಭೆ ಆಯೋಜಿಸಲಾಗಿತ್ತು. ಈ ವೇಳೆ ಸ್ಥಳೀಯ ಕಾಂಗ್ರೆಸ್ ಮುಖಂಡರು, ಪಕ್ಷದ ಕಾರ್ಯಕರ್ತರು ಹಾಗೂ ಪದವೀಧರ ಮತದಾರರು ಪಾಲ್ಗೊಂಡು ಚುನಾವಣಾ ಪ್ರಚಾರದ ಕುರಿತು ಚರ್ಚಿಸಿದರು.

ಮಾಯಕೊಂಡ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಅಭ್ಯರ್ಥಿಯ ಪರವಾಗಿ ಮತಯಾಚನೆ ನಡೆಸುವ ಮೂಲಕ ಚುನಾವಣಾ ಪ್ರಚಾರಕ್ಕೆ ಒತ್ತು ನೀಡಲಾಯಿತು. ಪಕ್ಷದ ಮುಖಂಡರು ಮತ್ತು ಕಾರ್ಯಕರ್ತರು ಒಗ್ಗಟ್ಟಿನಿಂದ ಪ್ರಚಾರ ಕಾರ್ಯದಲ್ಲಿ ತೊಡಗಿಸಿಕೊಳ್ಳುವ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಸಭೆಯಲ್ಲಿ ಭಾಗವಹಿಸಿದ್ದ ಪದವೀಧರ ಮತದಾರರು, ಕಾಂಗ್ರೆಸ್ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರಿಗೆ ಸಚಿವ ಕೆ.ಎಸ್. ಬಸವಂತಪ್ಪ ಧನ್ಯವಾದ ಅರ್ಪಿಸಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಸ್ಥಳೀಯ ಮುಖಂಡರು, ಕಾರ್ಯಕರ್ತರು ಹಾಗೂ ಪದವೀಧರ ಮತದಾರರು ಉಪಸ್ಥಿತರಿದ್ದರು.

ಬೆಳಗಿನ ನಡೆ–ಗ್ರಾಮಗಳ ಕಡೆ' ಅಭಿಯಾನ: ಡೊಣಗಾಪುರ ಗ್ರಾಮಕ್ಕೆ ಜಿಪಂ ಸಿಇಒ ಭೇಟಿ
ನೀರಿನ ಸಮಸ್ಯೆ ಪರಿಹಾರಕ್ಕೆ ಎರಡು ಕೊಳವೆ ಬಾವಿ ಕೊರೆಸಲು ಸೂಚನೆ

"ಮುಂಜಾನೆಯ ಮೆರಗು"

ಬೀದರ್ ಅ, 18– ಗ್ರಾಮೀಣ ಪ್ರದೇಶಗಳ ಅಭಿವೃದ್ಧಿ ಕಾಮಗಾರಿಗಳ ಪರಿಶೀಲನೆ ಹಾಗೂ ಸಾರ್ವಜನಿಕರ ಕುಂದುಕೊರತೆಗಳಿಗೆ ಸ್ಥಳದಲ್ಲೇ ಪರಿಹಾರ ಕಲ್ಪಿಸುವ ಉದ್ದೇಶದಿಂದ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಿತ್ತೆ ಮಾಧವ್ ವಿಠ್ಠಲರಾವ್ ಭಾಲ್ಕಿ ತಾಲೂಕಿನ ಡೊಣಗಾಪುರ ಗ್ರಾಮಕ್ಕೆ ಭೇಟಿ ನೀಡಿ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಪರಿಶೀಲಿಸಿದರು.

'ಬೆಳಗಿನ ನಡೆ–ಗ್ರಾಮಗಳ ಕಡೆ' ಅಭಿಯಾನದ ಅಂಗವಾಗಿ ಗ್ರಾಮಕ್ಕೆ ಭೇಟಿ ನೀಡಿದ ಅವರು, ಗ್ರಾಮ ಪಂಚಾಯಿತಿ ಆವರಣದಲ್ಲಿ ತುರ್ತು ಕುಂದುಕೊರತೆ ಸಭೆ ನಡೆಸಿ ಗ್ರಾಮಸ್ಥರ ಸಮಸ್ಯೆಗಳನ್ನು ಆಲಿಸಿದರು. ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಿರುವ ಹಿನ್ನೆಲೆಯಲ್ಲಿ, ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಎರಡು ಹೊಸ ಕೊಳವೆ ಬಾವಿಗಳನ್ನು ಕೊರೆಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು. ಅಲ್ಲಿಯವರೆಗೆ ಟ್ಯಾಂಕರ್‌ಗಳ ಮೂಲಕ ಗ್ರಾಮಸ್ಥರಿಗೆ ಸಮರ್ಪಕವಾಗಿ ನೀರು ಪೂರೈಸುವಂತೆ ನಿರ್ದೇಶನ ನೀಡಿದರು.

ಎರಡು ತಿಂಗಳಲ್ಲಿ ಐತಿಹಾಸಿಕ ಕಲ್ಯಾಣಿ ಪುನಶ್ಚೇತನಕ್ಕೆ ಸೂಚನೆ

ಗ್ರಾಮದ ಐತಿಹಾಸಿಕ ಕಲ್ಯಾಣಿಯನ್ನು ವಿಬಿ–ಜಿ ರಾಮ್ ಜಿ ಯೋಜನೆಯಡಿ ಪುನಶ್ಚೇತನಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಿದ ಸಿಇಒ, ಕಾಮಗಾರಿಯನ್ನು ಎರಡು ತಿಂಗಳೊಳಗೆ ಪೂರ್ಣಗೊಳಿಸಲು ಗಡುವು ವಿಧಿಸಿದರು. ಐತಿಹಾಸಿಕ ಜಲಮೂಲಗಳ ಸಂರಕ್ಷಣೆ ಹಾಗೂ ಗ್ರಾಮೀಣ ಜಲಸಂಪನ್ಮೂಲಗಳ ಅಭಿವೃದ್ಧಿಗೆ ಆದ್ಯತೆ ನೀಡುವಂತೆ ತಿಳಿಸಿದರು.

ಇದೇ ಸಂದರ್ಭದಲ್ಲಿ ಯೋಜನೆಯಡಿ ಕೈಗೊಳ್ಳಲಾಗಿರುವ ಸಮುದಾಯ ಕಾಮಗಾರಿಗಳನ್ನು ಪರಿಶೀಲಿಸಿದ ಅವರು, ಕೆಲಸದಲ್ಲಿ ತೊಡಗಿದ್ದ ಕೂಲಿಕಾರರೊಂದಿಗೆ



ಸಂವಾದ ನಡೆಸಿ ಅವರ ಸಮಸ್ಯೆಗಳು ಹಾಗೂ ಕಾಮಗಾರಿಯ ಪ್ರಗತಿ ಕುರಿತು ಮಾಹಿತಿ ಪಡೆದರು. ಬಳಿಕ ಕೂಲಿಕಾರರೊಂದಿಗೆ ಶ್ರಮದಾನದಲ್ಲಿಯೂ ಪಾಲ್ಗೊಂಡರು.

ಗ್ರಾಮೀಣ ಪ್ರದೇಶಗಳಲ್ಲಿನ ಮೂಲಸೌಕರ್ಯ ಅಭಿವೃದ್ಧಿ, ಕುಡಿಯುವ ನೀರಿನ ಸಮಸ್ಯೆ ನಿವಾರಣೆ ಹಾಗೂ ಸಾರ್ವಜನಿಕರ ಕುಂದುಕೊರತೆಗಳಿಗೆ ತ್ವರಿತ ಸ್ಪಂದನೆ ನೀಡುವ ನಿಟ್ಟಿನಲ್ಲಿ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು ಎಂದು ಈ ಭೇಟಿಯ ಮೂಲಕ ಒತ್ತಿ ಹೇಳಿದರು.

ಕಲೆ, ಸಂಗೀತ ನಮ್ಮ ಸಾಂಸ್ಕೃತಿಕ ಪರಂಪರೆಯ ಪ್ರತೀಕ: ಸಚಿವ ಕೆ.ಎಸ್. ಬಸವಂತಪ್ಪ

"ಮುಂಜಾನೆಯ ಮೆರಗು"

ದಾವಣಗೆರೆ ಅ 18– ನಗರದ ಎಸ್.ಎಸ್. ಮ್ಯೂಸಿಕ್ ಸ್ಟುಡಿಯೋ ವತಿಯಿಂದ ಆಯೋಜಿಸಲಾಗಿದ್ದ "ಐಕಾನ್ ವಾಯ್ಸ್ ಆಫ್ ದಾವಣಗೆರೆ" ರಾಜ್ಯಮಟ್ಟದ ಗಾಯನ ಸ್ಪರ್ಧೆ ಕಾರ್ಯಕ್ರಮದಲ್ಲಿ ಸಚಿವ ಕೆ.ಎಸ್. ಬಸವಂತಪ್ಪ ಭಾಗವಹಿಸಿ, ಗಾಯನ ಸ್ಪರ್ಧಿಗಳಿಗೆ ಶುಭ ಹಾರೈಸಿದರು.



ಈ ಸಂದರ್ಭದಲ್ಲಿ ಮಾತನಾಡಿದ ಅವರು, ಕಲೆ ಮತ್ತು ಸಂಗೀತ ನಮ್ಮ ನಾಡಿನ ಶ್ರೀಮಂತ ಸಾಂಸ್ಕೃತಿಕ ಪರಂಪರೆಯ ಪ್ರತೀಕಗಳಾಗಿವೆ. ಸಂಗೀತವು ಜನರ ಮನಸ್ಸುಗಳನ್ನು ಬೆಸೆಯುವ ಶಕ್ತಿಯನ್ನು ಹೊಂದಿದ್ದು, ಸಮಾಜದಲ್ಲಿ ಸಾಂಸ್ಕೃತಿಕ ಅಭಿರುಚಿ ಮತ್ತು ಸೃಜನಶೀಲತೆಯನ್ನು ಬೆಳೆಸುವಲ್ಲಿ ಮಹತ್ವದ ಪಾತ್ರ ವಹಿಸುತ್ತದೆ ಎಂದು ತಿಳಿಸಿದರು.

ಇಂತಹ ರಾಜ್ಯಮಟ್ಟದ ವೇದಿಕೆಗಳು ಉದಯೋನ್ಮುಖ ಗಾಯಕ–ಗಾಯಕಿಯರಲ್ಲಿರುವ ಪ್ರತಿಭೆಯನ್ನು ಗುರುತಿಸಲು ಹಾಗೂ ಅವರ ಕಲಾ ಪಯಣಕ್ಕೆ ಸೂಕ್ತ ಪ್ರೋತ್ಸಾಹ ನೀಡಲು ಸಹಕಾರಿಯಾಗುತ್ತವೆ. ಸ್ಪರ್ಧೆಗಳ ಮೂಲಕ ಯುವ ಪ್ರತಿಭೆಗಳಿಗೆ ತಮ್ಮ ಸಾಮರ್ಥ್ಯವನ್ನು ಪ್ರದರ್ಶಿಸಲು ಅವಕಾಶ ದೊರೆಯುವುದರ ಜತೆಗೆ, ಸಂಗೀತ ಕ್ಷೇತ್ರದಲ್ಲಿ ಮುಂದುವರಿಯಲು ಆತ್ಮವಿಶ್ವಾಸವೂ ಹೆಚ್ಚುತ್ತದೆ ಎಂದು ಹೇಳಿದರು.

ಸ್ಪರ್ಧೆಯಲ್ಲಿ ಭಾಗವಹಿಸಿದ್ದ ಎಲ್ಲ ಪ್ರತಿಭಾವಂತ ಗಾಯಕ–ಗಾಯಕಿಯರಿಗೆ ಶುಭ ಹಾರೈಸಿದ ಸಚಿವರು, ಪ್ರತಿಯೊಬ್ಬರೂ ಸಂಗೀತ ಕ್ಷೇತ್ರದಲ್ಲಿ ಮತ್ತಷ್ಟು ಸಾಧನೆ ಮಾಡಿ, ದಾವಣಗೆರೆ ಜಿಲ್ಲೆ ಹಾಗೂ ನಾಡಿನ ಕೀರ್ತಿಯನ್ನು ಹೆಚ್ಚಿಸಲಿ ಎಂದು ಆಶಿಸಿದರು.

ಸ್ಥಳೀಯ ಪ್ರತಿಭೆಗಳಿಗೆ ವೇದಿಕೆ ಕಲ್ಪಿಸುವ ಇಂತಹ ಕಾರ್ಯಕ್ರಮಗಳು ಸಂಗೀತ ಕ್ಷೇತ್ರದ ಬೆಳವಣಿಗೆಗೆ ಪೂರಕವಾಗಿವೆ.

ತಾಲೂಕಿಗೆ ಭದ್ರೆ ಹರಿಸಿಯೇ ತಿರುತ್ತೇವೆ ಎಸ್.ವಿ.ರಾಮಚಂದ್ರ
ಎನ್‌ಡಿಎ ಅಭ್ಯರ್ಥಿ ಕೆ.ಎಂ.ಸುರೇಶ್ ಪರ ಬಿಜೆಪಿ ಮುಖಂಡರ ಮತಯಾಚನೆ

"ಮುಂಜಾನೆಯ ಮೆರಗು"

ಜಗಳೂರು ಅ, 18– ಆಗ್ನೇಯ ಪದವೀಧರ ಕ್ಷೇತ್ರದ ವಿಧಾನಪರಿಷತ್ ಚುನಾವಣೆಯಲ್ಲಿ ಗೆಲುವು ಸಾಧಿಸುವುದು ಮುಂಬರುವ ಜಿಲ್ಲಾ ಪಂಚಾಯಿತಿ ಮತ್ತು ತಾಲೂಕು ಪಂಚಾಯಿತಿ ಚುನಾವಣೆಗಳಿಗೆ ದಿಕ್ಸೂಚಿಯಾಗಲಿದೆ. ಜಗಳೂರು ಕ್ಷೇತ್ರದಲ್ಲಿ ಬಿಜೆಪಿಯ ಸಂಘಟನಾ ಸಾಮರ್ಥ್ಯವನ್ನು ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಪ್ರದರ್ಶಿಸಲಿದ್ದೇವೆ ಎಂದು ಮಾಜಿ ಶಾಸಕ ಎಸ್.ವಿ.ರಾಮಚಂದ್ರ ಹೇಳಿದರು.

ಪಟ್ಟಣದ ವೀರಶೈವ ಕಲ್ಯಾಣ ಮಂಟಪದಲ್ಲಿ ಬಿಜೆಪಿ ವತಿಯಿಂದ ಆಯೋಜಿಸಿದ್ದ ಸ್ನೇಹಸಮ್ಮಿಲನ ಹಾಗೂ ಆಗ್ನೇಯ ಪದವೀಧರ ಕ್ಷೇತ್ರದ ಎನ್‌ಡಿಎ ಮೈತ್ರಿಕೂಟದ ಅಭ್ಯರ್ಥಿ ಕೆ.ಎಂ.ಸುರೇಶ್ ಪರ ಮತಯಾಚನಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಅಪ್ಪರ್ ಭದ್ರಾ ಯೋಜನೆ ಬಿಜೆಪಿಯ ಮಹತ್ವಾಕಾಂಕ್ಷೆಯ ಯೋಜನೆಯಾಗಿದ್ದು, ಅದನ್ನು ಜಗಳೂರು ತಾಲೂಕಿಗೆ ಹರಿಸಲು ಬದ್ಧರಾಗಿದ್ದೇವೆ. ಕೇಂದ್ರದಲ್ಲಿ ಬಿಜೆಪಿ ನೇತೃತ್ವದ ಸರ್ಕಾರವಿದ್ದು, ಯೋಜನೆಗೆ ಶೀಘ್ರ ಅನುದಾನ ತರುವ ವಿಶ್ವಾಸವಿದೆ. ಮುಂದಿನ ನಾಲ್ಕು ವರ್ಷಗಳಲ್ಲಿ ಜಗಳೂರು ತಾಲೂಕು ಅಡಿಕೆ ಕೃಷಿಯಲ್ಲಿ ಚನ್ನಗಿರಿಯನ್ನು ಮೀರಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಹಿಂದಿನ ಚುನಾವಣೆಯಲ್ಲಿ ವಿಧಾನಪರಿಷತ್ ಸದಸ್ಯ ಶಿವಯೋಗಿ ಸ್ವಾಮಿ ಅವರನ್ನು ಆಯ್ಕೆ ಮಾಡಿದಂತೆ ಈ ಬಾರಿಯೂ ಎನ್‌ಡಿಎ ಅಭ್ಯರ್ಥಿ



ಕೆ.ಎಂ.ಸುರೇಶ್ ಅವರನ್ನು ಬಹುಮತದಿಂದ ಗೆಲ್ಲಿಸಬೇಕು. ಯುವ ಕಾರ್ಯಕರ್ತರು ತಂಡೋಪತಂಡವಾಗಿ ಸಕ್ರಿಯವಾಗಿ ಕಾರ್ಯನಿರ್ವಹಿಸಿ ಚುನಾವಣೆಯನ್ನು ಗಂಭೀರವಾಗಿ ಎದುರಿಸಬೇಕು ಎಂದು ಕರೆ ನೀಡಿದರು.

ವಿಧಾನಪರಿಷತ್ ಮಾಜಿ ಸದಸ್ಯ ಹಾಗೂ ಮುಖ್ಯ ಸಚೇತಕ ಶಿವಯೋಗಿ ಸ್ವಾಮಿ ಮಾತನಾಡಿ, ವಿಧಾನಪರಿಷತ್ ಚುನಾವಣೆಯಲ್ಲಿ ಪ್ರಾಶಸ್ತ್ಯದ ಮತದಾನ ಪದ್ಧತಿ ಇರುವುದರಿಂದ ಮತದಾರರಿಗೆ ಸರಿಯಾದ ಮಾಹಿತಿ ನೀಡಬೇಕು. ವಿರೋಧ ಪಕ್ಷದ ಅಭ್ಯರ್ಥಿಯನ್ನು ಹಗುರವಾಗಿ ಪರಿಗಣಿಸಬಾರದು ಎಂದು ಎಚ್ಚರಿಸಿದರು.

ನಾಲ್ಕು ಕ್ಷೇತ್ರಗಳ ಪೈಕಿ ಮೂರು ಕ್ಷೇತ್ರಗಳಲ್ಲಿ ಬಿಜೆಪಿ ಅಭ್ಯರ್ಥಿಗಳೇ ಹಾಲಿ ವಿಧಾನಪರಿಷತ್ ಸದಸ್ಯರಾಗಿದ್ದಾರೆ. ಆಗ್ನೇಯ ಪದವೀಧರ ಕ್ಷೇತ್ರದಲ್ಲಿ ಒಟ್ಟು 1,85,496 ಮತದಾರರು ನೋಂದಣಿಯಾಗಿದ್ದು, ದಾವಣಗೆರೆ ಜಿಲ್ಲೆಯಲ್ಲಿ 31,161 ಮತದಾರರಿದ್ದಾರೆ. 12 ವರ್ಷಗಳ ಬಳಿಕ ಸ್ಥಳೀಯ ಅಭ್ಯರ್ಥಿ ಕೆ.ಎಂ.ಸುರೇಶ್ ಅವರಿಗೆ ಅವಕಾಶ ದೊರೆತಿರುವುದು ಸಂತಸದ ಸಂಗತಿಯಾಗಿದ್ದು, ಅವರ ಗೆಲುವಿಗೆ ಎಲ್ಲರೂ ಶ್ರಮಿಸಬೇಕು ಎಂದರು.

ಜೆಡಿಎಸ್ ರಾಜ್ಯ ಪ್ರಧಾನ ಕಾರ್ಯದರ್ಶಿ ಕಲ್ಲೇರುದ್ರೇಶ್ ಮಾತನಾಡಿ, ಕೇಂದ್ರ ಸರ್ಕಾರದ ಸಾಧನೆಗಳನ್ನು ಮತದಾರರಿಗೆ ತಿಳಿಸಬೇಕು. ಜಿಲ್ಲಾ ಪಂಚಾಯಿತಿ ಮತ್ತು ತಾಲೂಕು ಪಂಚಾಯಿತಿ ಚುನಾವಣೆಯ ಆಕಾಂಕ್ಷಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು. ಶಾಸಕರು ಇತ್ತೀಚೆಗೆ ನೀಡಿದ್ದ ಸವಾಲಿಗೆ ಉತ್ತರಿಸುವ ರೀತಿಯಲ್ಲಿ, ನಮ್ಮ ಕಾರ್ಯಕರ್ತರ ಸಂಘಟನಾ ಶಕ್ತಿಯನ್ನು ಚುನಾವಣೆಯ

ಸಂವಿಧಾನದ ಮೌಲ್ಯಗಳ ರಕ್ಷಣೆ, ಜನರಿಗೆ ಸಕಾಲಿಕ ನ್ಯಾಯ ದೊರಕಿಸುವುದು ನಮ್ಮ ಹೊಣೆ: ಡಿ.ಕೆ.ಶಿವಕುಮಾರ್

ಯುವ ವಕೀಲರಿಗೆ ನಿರಂತರ ಶಿಕ್ಷಣ, ನ್ಯಾಯಾಂಗ ಸೇವಾ ಪರೀಕ್ಷೆಗಳಿಗೆ ತರಬೇತಿ ನೀಡಲು ಪ್ರತ್ಯೇಕ ಸಂಸ್ಥೆ ಸ್ಥಾಪನೆ

"ಮುಂಜಾನೆಯ ಮೆರಗು"

ಬೆಂಗಳೂರು ಅ, 18– ಸಂವಿಧಾನದ ಮೌಲ್ಯಗಳನ್ನು ರಕ್ಷಿಸುವುದು, ಪ್ರಜಾಪ್ರಭುತ್ವವನ್ನು ಬಲಪಡಿಸುವುದು ಹಾಗೂ ಪ್ರತಿಯೊಬ್ಬರಿಗೂ ಕೈಗೆಟುಕುವ ಮತ್ತು ಸಕಾಲಿಕ ನ್ಯಾಯ ದೊರೆಯುವಂತೆ ಮಾಡುವುದು ನಮ್ಮೆಲ್ಲರ ಹೊಣೆಗಾರಿಕೆಯಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದರು.

ಬೆಂಗಳೂರಿನ ನ್ಯಾಷನಲ್ ಲಾ ಸ್ಕೂಲ್ ಆಫ್ ಇಂಡಿಯಾ ಯೂನಿವರ್ಸಿಟಿಯ (ಎನ್‌ಎಲ್‌ಎಸ್‌ಐಯು) 34ನೇ ಘಟಿಕೋತ್ಸವದಲ್ಲಿ ಭಾಗವಹಿಸಿ, ಪದವೀಧರ ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಿದ ಬಳಿಕ ಅವರು ಮಾತನಾಡಿದರು.

ಭಾರತದ ಮುಖ್ಯ ನ್ಯಾಯಮೂರ್ತಿ ಹಾಗೂ ವಿಶ್ವವಿದ್ಯಾಲಯದ ಕುಲಪತಿ ನ್ಯಾಯಮೂರ್ತಿ ಸೂರ್ಯಕಾಂತ್, ಕರ್ನಾಟಕ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ನ್ಯಾಯಮೂರ್ತಿ ವಿಭು ಬಖ್ರು, ವಿಶ್ವವಿದ್ಯಾಲಯದ ಉಪಕುಲಪತಿ



ಡಾ. ಸುಧೀರ್ ಕೃಷ್ಣಸ್ವಾಮಿ ಸೇರಿದಂತೆ ಹಲವು ಗಣ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ನ್ಯಾಯ ವ್ಯವಸ್ಥೆಯಲ್ಲಿ ಜನರೇ ಕೇಂದ್ರಬಿಂದು

ಯುವ ಕಾನೂನು ವೃತ್ತಿಪರರು ಪ್ರಾಮಾಣಿಕತೆ, ನೈತಿಕತೆ ಮತ್ತು ಬದ್ಧತೆಯೊಂದಿಗೆ ಕಾರ್ಯನಿರ್ವಹಿಸಬೇಕು. ಅನ್ಯಾಯದ ವಿರುದ್ಧ ಧ್ವನಿ ಎತ್ತುವುದರ ಜತೆಗೆ, ನ್ಯಾಯ ವ್ಯವಸ್ಥೆಯಲ್ಲಿ ಜನರ ಹಿತಾಸಕ್ತಿಗೆ ಮೊದಲ ಆದ್ಯತೆ ನೀಡಬೇಕು ಎಂದು ಮುಖ್ಯಮಂತ್ರಿ ಕರೆ ನೀಡಿದರು.

ದೇಶದ ಅಭಿವೃದ್ಧಿಯನ್ನು ಕೇವಲ ಆರ್ಥಿಕ ಬೆಳವಣಿಗೆಯ ಆಧಾರದ ಮೇಲೆ ಅಳೆಯಲು ಸಾಧ್ಯವಿಲ್ಲ. ಸಮಾಜದಲ್ಲಿ ಸಮಾನತೆ, ಪ್ರತಿಯೊಬ್ಬರ ಘನತೆಯ ರಕ್ಷಣೆ ಮತ್ತು ನ್ಯಾಯದ ಲಭ್ಯತೆಯೂ ನಿಜವಾದ ಪ್ರಗತಿಯ ಪ್ರಮುಖ ಮಾನದಂಡಗಳಾಗಿವೆ ಎಂದು ಅವರು ಅಭಿಪ್ರಾಯಪಟ್ಟರು.

ಕಾನೂನು ಪದವಿ ಪಡೆಯುವುದು ಕೇವಲ ವೃತ್ತಿಜೀವನದ ಆರಂಭವಲ್ಲ; ಸಮಾಜದಲ್ಲಿ ನ್ಯಾಯ ಮತ್ತು ಸಮಾನತೆಯನ್ನು ಎತ್ತಿಹಿಡಿಯುವ ಮಹತ್ವದ ಜವಾಬ್ದಾರಿಯ ಆರಂಭವೂ ಆಗಿದೆ. ಯುವ ಪದವೀಧರರು ತಮ್ಮ ಜ್ಞಾನ ಮತ್ತು ಕೌಶಲ್ಯವನ್ನು ಸಮಾಜದ ಹಿತಕ್ಕಾಗಿ ಬಳಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಯುವ ಉದ್ಯಮಿಗಳಿಗೆ ಉಚಿತ ಕಾನೂನು ಸಲಹೆ

ರಾಜ್ಯದಲ್ಲಿ ಕಾನೂನು ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ, ಯುವ ಉದ್ಯಮಿಗಳಿಗೆ ಉಚಿತ ಕಾನೂನು ಸಲಹೆ ಒದಗಿಸಲು ಎನ್‌ಎಲ್‌ಎಸ್‌ಐಯುನಲ್ಲಿ ಸ್ಟಾರ್ಟ್‌ಅಪ್ ಕಾನೂನು ಕ್ಲಿನಿಕ್ ಸ್ಥಾಪನೆಗೆ ಸರ್ಕಾರ ಬೆಂಬಲ ನೀಡಲಿದೆ ಎಂದು ಮುಖ್ಯಮಂತ್ರಿ ತಿಳಿಸಿದರು.

ಇದರೊಂದಿಗೆ, ಕಾನೂನು ಪದವೀಧರರನ್ನು ನ್ಯಾಯಾಂಗ ಸೇವಾ ಪರೀಕ್ಷೆಗಳಿಗೆ ಸಜ್ಜುಗೊಳಿಸುವುದು ಹಾಗೂ ಯುವ ವಕೀಲರಿಗೆ ನಿರಂತರ ಶಿಕ್ಷಣ ಮತ್ತು ತರಬೇತಿ ಒದಗಿಸುವ



ಉದ್ದೇಶದಿಂದ ಪ್ರತ್ಯೇಕ ಸಂಸ್ಥೆ ಸ್ಥಾಪಿಸುವ ಯೋಜನೆಯನ್ನೂ ಅವರು ಪ್ರಕಟಿಸಿದರು.

ಯುವ ಉದ್ಯಮಿಗಳಿಗೆ ಕಾನೂನು ನೆರವು ದೊರೆಯುವುದರ ಜತೆಗೆ, ನ್ಯಾಯಾಂಗ ಸೇವೆಗೆ ಪ್ರವೇಶಿಸಲು ಬಯಸುವ ಕಾನೂನು ಪದವೀಧರರಿಗೆ ಸೂಕ್ತ ಮಾರ್ಗದರ್ಶನ ಮತ್ತು ಯುವ ವಕೀಲರಿಗೆ ವೃತ್ತಿಪರ ಕೌಶಲ್ಯ ವೃದ್ಧಿಯ ಅವಕಾಶಗಳನ್ನು ಕಲ್ಪಿಸುವುದು ಈ ಕ್ರಮಗಳ ಪ್ರಮುಖ ಉದ್ದೇಶವಾಗಿದೆ.

ಸಂವಿಧಾನದ ಆಶಯಗಳನ್ನು ಎತ್ತಿಹಿಡಿಯುವ, ನ್ಯಾಯದ ಮೌಲ್ಯಗಳಿಗೆ ಬದ್ಧವಾಗಿರುವ ಹಾಗೂ ಜನಸಾಮಾನ್ಯರ ಹಕ್ಕುಗಳ ರಕ್ಷಣೆಗೆ ಆದ್ಯತೆ ನೀಡುವ ಕಾನೂನು ವೃತ್ತಿಪರರ ಅಗತ್ಯವಿದೆ ಎಂಬ ಸಂದೇಶವನ್ನು ಮುಖ್ಯಮಂತ್ರಿ ತಮ್ಮ ಭಾಷಣದಲ್ಲಿ ಒತ್ತಿಹೇಳಿದರು.

ಅರ್ಹ ಫಲಾನುಭವಿಗಳಿಗೆ ಮೋಟಾರ್ ಪಂಪ್‌ಸೆಟ್ ವಿತರಣೆ: ಲಕ್ಷ್ಮೀ ಹೆಬ್ಬಾಳ್ಕರ್

"ಮುಂಜಾನೆಯ ಮೆರಗು"

ಬೆಳಗಾವಿ ಅ, 18– ರೈತರ ಕೃಷಿ ಚಟುವಟಿಕೆಗಳಿಗೆ ಉತ್ತೇಜನ ನೀಡುವ ಹಾಗೂ ನೀರಾವರಿ ಸೌಲಭ್ಯ ಕಲ್ಪಿಸುವ ಉದ್ದೇಶದಿಂದ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಬೆಳಗಾವಿ ಜಿಲ್ಲಾ ಘಟಕದ ವತಿಯಿಂದ ಬೆಳಗಾವಿ ಗ್ರಾಮೀಣ ಕ್ಷೇತ್ರದ ಅರ್ಹ ಫಲಾನುಭವಿಗಳಿಗೆ ಮೋಟಾರ್ ಪಂಪ್‌ಸೆಟ್‌ಗಳನ್ನು ಮಾಜಿ ಸಚಿವೆ ಹಾಗೂ ಶಾಸಕಿ ಲಕ್ಷ್ಮೀ ಹೆಬ್ಬಾಳ್ಕರ್ ಹಸ್ತಾಂತರಿಸಿದರು.



ಈ ಸಂದರ್ಭದಲ್ಲಿ ಮಾತನಾಡಿದ ಶಾಸಕಿ ಲಕ್ಷ್ಮೀ ಹೆಬ್ಬಾಳ್ಕರ್, ರೈತರ ಕೃಷಿ ಚಟುವಟಿಕೆಗಳಿಗೆ ಅಗತ್ಯವಾದ ನೀರಾವರಿ ಸೌಲಭ್ಯ ಒದಗಿಸಿ ಅವರ ಜೀವನಮಟ್ಟ ಸುಧಾರಿಸುವ ನಿಟ್ಟಿನಲ್ಲಿ ಸರ್ಕಾರ ಹಲವು ಯೋಜನೆಗಳನ್ನು ಜಾರಿಗೊಳಿಸುತ್ತಿದೆ. ಸರ್ಕಾರದ ಸೌಲಭ್ಯಗಳು ಸಮಾಜದ ಕಟ್ಟಕಡೆಯ ವ್ಯಕ್ತಿಗೂ ತಲುಪಬೇಕು ಎಂಬ ಉದ್ದೇಶದಿಂದ ಅರ್ಹ ಫಲಾನುಭವಿಗಳಿಗೆ ನೆರವು ನೀಡಲಾಗುತ್ತಿದೆ ಎಂದು ತಿಳಿಸಿದರು.

ಫಲಾನುಭವಿಗಳು ಸರ್ಕಾರದ ಯೋಜನೆಗಳನ್ನು ಸಮರ್ಪಕವಾಗಿ ಬಳಸಿಕೊಂಡು ಕೃಷಿ ಚಟುವಟಿಕೆಗಳನ್ನು ಅಭಿವೃದ್ಧಿಪಡಿಸಿಕೊಳ್ಳಬೇಕು. ಇದರ ಮೂಲಕ ಪರಿಶಿಷ್ಟ ಪಂಗಡದ ಸಮುದಾಯದ ಬಾಂಧವರು ಆರ್ಥಿಕವಾಗಿ ಸ್ವಾವಲಂಬಿಗಳಾಗಿ, ತಮ್ಮ ಜೀವನಮಟ್ಟವನ್ನು ಮತ್ತಷ್ಟು ಸುಧಾರಿಸಿಕೊಳ್ಳಬೇಕು ಎಂದು ಆಶಿಸಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಬೆಳಗಾವಿ ಜಿಲ್ಲಾ ವ್ಯವಸ್ಥಾಪಕ ಸದಾಶಿವ ಭೀಮಗೋಳ, ತಾಲೂಕು ಅಭಿವೃದ್ಧಿ ಅಧಿಕಾರಿ ಬಿ.ಎಂ. ಮಂಜಪ್ಪ, ಕಚೇರಿ ಸಿಬ್ಬಂದಿ ಗಂಗಾಧರ ಜಿರಳೆ ಹಾಗೂ ಅರವಿಂದ್ ದ್ಯಾಮನಗೌಡರ್ ಉಪಸ್ಥಿತರಿದ್ದರು.

ವಾಲ್ಮೀಕಿ ಜಯಂತಿ ಪೂರ್ವಸಿದ್ಧತೆ: ಸಮುದಾಯದ ಬೇಡಿಕೆಗಳ ಈಡೇರಿಕೆಗೆ ಸಚಿವ ಟಿ.ರಘುಮೂರ್ತಿ ಸೂಚನೆ

"ಮುಂಜಾನೆಯ ಮೆರಗು"

ಬೆಂಗಳೂರು ಅ, 18– ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆಯನ್ನು ಅರ್ಥಪೂರ್ಣವಾಗಿ ಆಯೋಜಿಸುವುದು ಹಾಗೂ ಪರಿಶಿಷ್ಟ ಪಂಗಡಗಳ ಸಮುದಾಯದ ಪ್ರಮುಖ ಬೇಡಿಕೆಗಳ ಕುರಿತು ಚರ್ಚಿಸಿ, ಸಮುದಾಯದ ಸರ್ವತೋಮುಖ ಅಭಿವೃದ್ಧಿಗೆ ಅಗತ್ಯ ಕ್ರಮ ಕೈಗೊಳ್ಳುವ ನಿಟ್ಟಿನಲ್ಲಿ ಸಚಿವ ಟಿ.ರಘುಮೂರ್ತಿ ಅವರು ಬೆಂಗಳೂರಿನ ವಿಕಾಸಸೌಧದಲ್ಲಿ ಸಮುದಾಯದ ಮುಖಂಡರು, ಪ್ರಮುಖರು ಹಾಗೂ ಅಧಿಕಾರಿಗಳ ಸಭೆ ನಡೆಸಿದರು.

ಸಭೆಯಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿಯ ಪೂರ್ವಸಿದ್ಧತೆ, ಕಾರ್ಯಕ್ರಮಗಳ ರೂಪುರೇಷೆ ಹಾಗೂ ಆಚರಣೆಯನ್ನು ಯಶಸ್ವಿಗೊಳಿಸುವ ಕುರಿತು ಚರ್ಚಿಸಲಾಯಿತು. ಇದೇ ವೇಳೆ ಪರಿಶಿಷ್ಟ ಪಂಗಡಗಳ ಸಮುದಾಯದ ಬಹುದಿನಗಳ ಬೇಡಿಕೆಗಳು ಮತ್ತು



ಅಭಿವೃದ್ಧಿ ಸಂಬಂಧಿತ ವಿಷಯಗಳ ಬಗ್ಗೆ ಸಮಾಲೋಚನೆ ನಡೆಸಲಾಯಿತು.

ಮೀಸಲಾತಿ ಹೆಚ್ಚಳಕ್ಕೆ ಸಂಬಂಧಿಸಿದ ವಿಚಾರ, ಇಲಾಖೆಯ ವಿವಿಧ ಸೌಲಭ್ಯಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವುದು, ವಾಲ್ಮೀಕಿ ಉದ್ಯಾನವನದ ಅಭಿವೃದ್ಧಿ, ವಾಲ್ಮೀಕಿ ಭವನ ನಿರ್ಮಾಣ ಹಾಗೂ ಪರಿಶಿಷ್ಟ ಪಂಗಡಗಳ ವಸತಿ ಶಾಲೆಗಳಲ್ಲಿ ಎದುರಾಗುತ್ತಿರುವ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ಕುರಿತು ಸಭೆಯಲ್ಲಿ ಗಮನ ಹರಿಸಲಾಯಿತು. ಅಲ್ಲದೆ, ವಾಲ್ಮೀಕಿ ಪ್ರಶಸ್ತಿಗಳ ನಿಯಮಗಳನ್ನು ಮರುಪರಿಶೀಲಿಸುವುದು ಸೇರಿದಂತೆ ಹಲವು ಮಹತ್ವದ ವಿಷಯಗಳ ಬಗ್ಗೆಯೂ ಚರ್ಚೆ ನಡೆಯಿತು.

ಸಮುದಾಯದ ಶೈಕ್ಷಣಿಕ, ಸಾಮಾಜಿಕ ಮತ್ತು ಆರ್ಥಿಕ ಪ್ರಗತಿಗೆ ಆದ್ಯತೆ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಲಾಯಿತು. ಸರ್ಕಾರದ ವಿವಿಧ ಯೋಜನೆಗಳ ಪ್ರಯೋಜನಗಳು ಅರ್ಹ ಫಲಾನುಭವಿಗಳಿಗೆ ಸಮರ್ಪಕವಾಗಿ ತಲುಪಬೇಕು. ವಿದ್ಯಾರ್ಥಿಗಳು ಎದುರಿಸುತ್ತಿರುವ ಸಮಸ್ಯೆಗಳನ್ನು ಗುರುತಿಸಿ ಪರಿಹರಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸಚಿವರು ತಿಳಿಸಿದರು.

ಪರಿಶಿಷ್ಟ ಪಂಗಡಗಳ ಸಮುದಾಯದ ಅಭಿವೃದ್ಧಿ ಹಾಗೂ ಕಲ್ಯಾಣಕ್ಕಾಗಿ ಸರ್ಕಾರ ಬದ್ಧವಾಗಿದ್ದು, ಸಮುದಾಯದ ಬೇಡಿಕೆಗಳನ್ನು ಪರಿಶೀಲಿಸಿ, ಅರ್ಹತೆ ಮತ್ತು ನಿಯಮಾನುಸಾರ ಸೂಕ್ತ ಕ್ರಮ ಕೈಗೊಳ್ಳುವ ಅಗತ್ಯವಿದೆ ಎಂಬ ಆಶಯ ಸಭೆಯಲ್ಲಿ ವ್ಯಕ್ತವಾಯಿತು.

ಮಾಜಿ ಶಾಸಕ ಎಸ್.ವಿ. ರಾಮಚಂದ್ರ ಸಮ್ಮುಖದಲ್ಲಿ ಬಿಜೆಪಿಗೆ ಅಜ್ಜಯ್ಯ ನಾಡಿಗಾರ್ ಸೇರ್ಪಡೆ



"ಮುಂಜಾನೆಯ ಮೆರಗು"

ಜಗಳೂರು ಅ, 18– ಮಾಜಿ ಶಾಸಕ ಎಸ್.ವಿ. ರಾಮಚಂದ್ರ ಅವರ ಸಮ್ಮುಖದಲ್ಲಿ ಅಜ್ಜಯ್ಯ ನಾಡಿಗಾರ್ ಅವರು ಬಿಜೆಪಿ ಪಕ್ಷಕ್ಕೆ ಸೇರ್ಪಡೆಯಾದರು.

ಈ ಸಂದರ್ಭದಲ್ಲಿ ಬಿಜೆಪಿ ಮಂಡಲ ಅಧ್ಯಕ್ಷ ಎಂ. ಮರುಳಾರಾಧ್ಯ, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಎಸ್.ಕೆ. ಮಂಜುನಾಥ್, ಓಬಳೇಶ್ ಸೇರಿದಂತೆ ಪಕ್ಷದ ಮುಖಂಡರು ಉಪಸ್ಥಿತರಿದ್ದರು.

ಸ್ಟಿಂಗ್ ಆಪರೇಷನ್ ಹೆಸರಿನಲ್ಲಿ ಬ್ಲ್ಯಾಕ್‌ಮೇಲ್ ಆರೋಪ: ರಾಕೇಶ್ ಶೆಟ್ಟಿ ಸೇರಿ ಮೂವರ ಬಂಧನಕ್ಕೆ ಕುಮಾರಸ್ವಾಮಿ ಆಗ್ರಹ

"ಮುಂಜಾನೆಯ ಮೆರಗು"

ಬೆಂಗಳೂರು ಅ, 18– ಸ್ಟಿಂಗ್ ಆಪರೇಷನ್ ಮೂಲಕ ರಾಜಕಾರಣಿಗಳು, ಸರ್ಕಾರಿ ಅಧಿಕಾರಿಗಳು ಹಾಗೂ ಉದ್ಯಮಿಗಳನ್ನು ಬ್ಲ್ಯಾಕ್‌ಮೇಲ್ ಮಾಡಿ ಹಣ ಸುಲಿಗೆ ಮಾಡುತ್ತಿದ್ದಾರೆ ಎಂಬ ಆರೋಪಕ್ಕೆ ಸಂಬಂಧಿಸಿದಂತೆ ರಾಕೇಶ್ ಶೆಟ್ಟಿ ಹಾಗೂ ಅವರ ಸಹಚರರಾದ ಬಾಗೇಪಲ್ಲಿ ಪ್ರಶಾಂತ್ ಮತ್ತು ಕೃಪಾ ಆಳ್ವ ಅವರನ್ನು ಕೂಡಲೇ ಬಂಧಿಸಿ, ಸಮಗ್ರ ತನಿಖೆ ನಡೆಸಬೇಕು ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಒತ್ತಾಯಿಸಿದ್ದಾರೆ.

ಈ ಸಂಬಂಧ ಜೆಡಿಎಸ್ ಶಾಸಕಾಂಗ ಪಕ್ಷದ ನೇತೃತ್ವದಲ್ಲಿ ರಾಜ್ಯ ಪೊಲೀಸ್ ಮಹಾನಿರ್ದೇಶಕರಿಗೆ ದೂರು ಸಲ್ಲಿಸಿ, ಆರೋಪಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಮನವಿ ಮಾಡಲಾಯಿತು.

ರಾಜಕಾರಣಿಗಳು, ಅಧಿಕಾರಿಗಳು ಮತ್ತು ಉದ್ಯಮಿಗಳನ್ನು ಗುರಿಯಾಗಿಸಿಕೊಂಡು ಸ್ಟಿಂಗ್ ಆಪರೇಷನ್ ಮೂಲಕ ಬೆದರಿಕೆ ಹಾಕಿ ಹಣ ವಸೂಲಿ ಮಾಡಲಾಗುತ್ತಿದೆ ಎಂಬ ಗಂಭೀರ ಆರೋಪಗಳು ಕೇಳಿಬಂದಿದ್ದು, ಈ ಕುರಿತು ನಿಷ್ಪಕ್ಷಪಾತ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಕುಮಾರಸ್ವಾಮಿ ಆಗ್ರಹಿಸಿದರು.

ಈ ನಿಯೋಗದಲ್ಲಿ ಮಾಜಿ ಸಚಿವರಾದ ಎಚ್.ಡಿ.ರೇವಣ್ಣ, ಬಂಡೆಪ್ಪ ಕಾಶೆಂಪುರ, ಸಾ.ರಾ.ಮಹೇಶ್, ವೆಂಕಟರಾವ್ ನಾಡಗೌಡ, ಡಿ.ಸಿ.ತಮ್ಮಣ್ಣ, ಶಾಸಕಾಂಗ ಪಕ್ಷದ ನಾಯಕ ಸಿ.ಬಿ.ಸುರೇಶ್ ಬಾಬು, ರಾಜ್ಯ ಕೋರ್ ಕಮಿಟಿ ಅಧ್ಯಕ್ಷ ಎಂ.ಕೃಷ್ಣಾರೆಡ್ಡಿ, ಸಂಸದ ಎಂ.ಮಲ್ಲೇಶ್ ಬಾಬು, ಗ್ರೇಟರ್ ಬೆಂಗಳೂರು ಜೆಡಿಎಸ್ ಅಧ್ಯಕ್ಷ ಎಚ್.ಎಂ.ರಮೇಶ್ ಗೌಡ, ಶಾಸಕರಾದ ಟಿ.ಎ.ಶರವಣ, ಕರೆಮ್ಮ ನಾಯಕ, ಎಚ್.ಟಿ.ಮಂಜುನಾಥ್, ಸಿ.ಎನ್.ಮಂಜೇಗೌಡ ಸೇರಿದಂತೆ ಹಲವು



ಮುಖಂಡರು ಉಪಸ್ಥಿತರಿದ್ದರು.

ಮಾಜಿ ಶಾಸಕರಾದ ಕೆ.ಅನ್ನದಾನಿ, ಎ.ಮಂಜುನಾಥ್, ಅಖಂಡ ಶ್ರೀನಿವಾಸಮೂರ್ತಿ, ಶಿವಶಂಕರ್, ದೊಡ್ಡನಗೌಡ ಪಾಟೀಲ ಹಾಗೂ ವಕ್ತಾರರಾದ ದೇವರಾಜ್, ಪ್ರದೀಪ್ ಕುಮಾರ್ ಸೇರಿದಂತೆ ಪಕ್ಷದ ಹಲವು ನಾಯಕರು ನಿಯೋಗದಲ್ಲಿದ್ದರು.

ರೈತರ ನಂಬಿಕೆ ಉಳಿಸಿಕೊಳ್ಳುವುದು ನನ್ನ ಜವಾಬ್ದಾರಿ: ಡಿ.ಕೆ.ಶಿವಕುಮಾರ್

ದಸರಾ ಬಳಿಕ ಸಕ್ಕರೆ ಕಾರ್ಖಾನೆ ಮಾಲೀಕರು, ರೈತ ಮುಖಂಡರು ಹಾಗೂ ಕೇಂದ್ರದ ಅಧಿಕಾರಿಗಳ ಸಭೆ

"ಮುಂಜಾನೆಯ ಮೆರಗು"

ಕಿತ್ತೂರು ಅ, 18– "ನೀವು ನನ್ನ ಮೇಲೆ ನಂಬಿಕೆ ಇಟ್ಟಿದ್ದೀರಿ. ಆ ನಂಬಿಕೆಯನ್ನು ಉಳಿಸಿಕೊಳ್ಳುವುದು ನನ್ನ ಜವಾಬ್ದಾರಿ. ರೈತರ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ನಾನು ಬದ್ಧನಾಗಿದ್ದೇನೆ. ನಿಮ್ಮ ಹೋರಾಟದ ನೋವು ನನಗೆ ಅರ್ಥವಾಗಿದೆ. ರೈತರು ಕರೆದಲ್ಲಿಗೆ ಬರಲು ನಾನು ಸಿದ್ಧನಿದ್ದೇನೆ" ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಭರವಸೆ ನೀಡಿದರು.

ಕಬ್ಬಿಗೆ ಸೂಕ್ತ ಬೆಲೆ ನಿಗದಿಪಡಿಸುವುದು ಹಾಗೂ ಕಬ್ಬಿನ ಬೆಲೆ ಹೆಚ್ಚಳಕ್ಕೆ ಆಗ್ರಹಿಸಿ ಪಾದಯಾತ್ರೆ ನಡೆಸುತ್ತಿದ್ದ ಕಬ್ಬು ಬೆಳೆಗಾರರನ್ನು ಬೆಳಗಾವಿ ಜಿಲ್ಲೆಯ ಕಿತ್ತೂರಿನಲ್ಲಿ ಭೇಟಿ ಮಾಡಿ ಮಾತನಾಡಿದ ಅವರು, ದಸರಾ ಹಬ್ಬದ ಬಳಿಕ ಮುಂದಿನ ವಾರದಲ್ಲೇ ಸಕ್ಕರೆ ಕಾರ್ಖಾನೆಗಳ ಮಾಲೀಕರು, ರೈತ ಮುಖಂಡರು ಹಾಗೂ ಕೇಂದ್ರದ ಅಧಿಕಾರಿಗಳ ಸಭೆ ಕರೆದು ಸಮಸ್ಯೆಗಳನ್ನು ಚರ್ಚಿಸುವುದಾಗಿ ತಿಳಿಸಿದರು.

ರೈತರು ಪ್ರತಿಭಟನೆಯನ್ನು ಕೈಬಿಡಬೇಕು ಎಂದು ಕೈಮುಗಿದು ಮನವಿ ಮಾಡಿದ ಅವರು, ರೈತರ ಬೇಡಿಕೆಗಳ ಕುರಿತು ಕೇಂದ್ರ ಸಚಿವರನ್ನು ಭೇಟಿ ಮಾಡಿ ಪರಿಹಾರ ಕಂಡುಕೊಳ್ಳಲು ಪ್ರಯತ್ನಿಸುವುದಾಗಿ ಹೇಳಿದರು.

ಕೇಂದ್ರ, ರಾಜ್ಯ ಹಾಗೂ ಕಾರ್ಖಾನೆಗಳ ಜಂಟಿ ಪ್ರಯತ್ನ ಅಗತ್ಯ



ರೈತರ ಸಮಸ್ಯೆಗಳನ್ನು ರಾಜ್ಯ ಸರ್ಕಾರವೊಂದರಿಂದಲೇ ಸಂಪೂರ್ಣವಾಗಿ ಪರಿಹರಿಸಲು ಸಾಧ್ಯವಿಲ್ಲ. ಇದರಲ್ಲಿ ಕೇಂದ್ರ ಸರ್ಕಾರ, ಬ್ಯಾಂಕುಗಳು ಹಾಗೂ ಸಕ್ಕರೆ ಕಾರ್ಖಾನೆಗಳ ಮಾಲೀಕರ ಪಾತ್ರವೂ ಪ್ರಮುಖವಾಗಿದೆ. ಎಲ್ಲರೂ ಒಟ್ಟಿಗೆ ಕುಳಿತು ಚರ್ಚಿಸಿದಾಗ ಮಾತ್ರ ಶಾಶ್ವತ ಪರಿಹಾರ ಕಂಡುಕೊಳ್ಳಲು ಸಾಧ್ಯ ಎಂದು ಡಿ.ಕೆ.ಶಿವಕುಮಾರ್ ಅಭಿಪ್ರಾಯಪಟ್ಟರು.

"ರೈತರೇ ನಮ್ಮ ದೇವರುಗಳು. ನಮ್ಮನ್ನು ಸಾಕಿ, ಬೆಳೆಸುವವರು ನೀವು. ರೈತರಿಗೆ ನಿಗದಿತ ಸಂಬಳವಿಲ್ಲ, ಪಿಂಚಣಿಯಿಲ್ಲ, ಬಡ್ತಿಯಿಲ್ಲ. ಆದರೂ ದೇಶದ ಜನರಿಗೆ ಅನ್ನ ನೀಡುವ ಮಹತ್ವದ ಕಾರ್ಯವನ್ನು ಮಾಡುತ್ತಿದ್ದೀರಿ. ನಿಮ್ಮ ಬದುಕಿನ ಭದ್ರತೆಗೆ ಸರ್ಕಾರ ಕೈಜೋಡಿಸಬೇಕು" ಎಂದು ಹೇಳಿದರು.

ರೈತರ ಸಂಕಷ್ಟಗಳನ್ನು ನೇರವಾಗಿ ಅರಿತುಕೊಳ್ಳುವ ಉದ್ದೇಶದಿಂದ ಬೆಂಗಳೂರಿನಿಂದ ಕಿತ್ತೂರಿಗೆ ಬಂದಿರುವುದಾಗಿ ತಿಳಿಸಿದ ಅವರು, ರೈತರ ಹೋರಾಟದ ನೋವು ಮತ್ತು ಸಂಕಷ್ಟಗಳನ್ನು ಅರ್ಥಮಾಡಿಕೊಂಡಿದ್ದೇನೆ ಎಂದರು.

ರೈತರ ಸಮಸ್ಯೆಗಳ ಕುರಿತು ಚರ್ಚಿಸಲು ಸಹಕಾರ, ಕೃಷಿ ಮತ್ತು ಸಕ್ಕರೆ ಸಚಿವರನ್ನು ದೆಹಲಿಗೆ ಕಳುಹಿಸಿ ಸಂಬಂಧಪಟ್ಟವರೊಂದಿಗೆ ಮಾತುಕತೆ ನಡೆಸಲಾಗಿದೆ. ಮುಂದಿನ ಹಂತದಲ್ಲಿಯೂ ಕೇಂದ್ರದ ಸಚಿವರನ್ನು ಭೇಟಿ ಮಾಡಿ ರೈತರ ಪರವಾಗಿ ಮನವಿ ಸಲ್ಲಿಸಲಾಗುವುದು ಎಂದು ತಿಳಿಸಿದರು.

ಕಾರ್ಖಾನೆಗಳು ಉಳಿದರೆ ರೈತರಿಗೂ ಅನುಕೂಲ

ಕಬ್ಬಿನ ಬೆಲೆ ನಿಗದಿ ಹಾಗೂ ಸಕ್ಕರೆ ಕಾರ್ಖಾನೆಗಳ ನಿರ್ವಹಣೆಯಲ್ಲಿ ಹಲವು ಸವಾಲುಗಳಿವೆ. ಉತ್ಪಾದನಾ ವೆಚ್ಚ, ವಿದ್ಯುತ್ ಖರೀದಿ, ನಷ್ಟ ಹಾಗೂ ಇತರ ರಾಜ್ಯಗಳಲ್ಲಿನ ನಿ

22 ಗ್ರಾ.ಪಂ. ವ್ಯಾಪ್ತಿಯ ಹಳ್ಳಿಗಳಿಗೆ ಮೂಲಸೌಕರ್ಯ ಕಲ್ಪಿಸಲು ಆಗ್ರಹಿಸಿ ರೈತ ಸಂಘಟನೆ ಪ್ರತಿಭಟನೆ
ಅ.28ರಂದು ಕುಂದುಕೊರತೆ ಸಭೆ ನಡೆಸುವುದಾಗಿ ಜಿ.ಪಂ. ಸಿಇಒ ಭರವಸೆ

"ಮುಂಜಾನೆಯ ಮೆರಗು"

ಜಗಳೂರು ಅ, 18– ತಾಲ್ಲೂಕಿನ 22 ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯ ಗ್ರಾಮಗಳಲ್ಲಿ ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆ ವತಿಯಿಂದ ಪಟ್ಟಣದಲ್ಲಿ ಪ್ರತಿಭಟನೆ ನಡೆಸಲಾಯಿತು.

ಪಟ್ಟಣದ ಅಂಬೇಡ್ಕರ್ ವೃತ್ತದಿಂದ ಆರಂಭವಾದ ಪ್ರತಿಭಟನಾ ಮೆರವಣಿಗೆ ಬಿದರಕೆರೆ ರಸ್ತೆ ಮೂಲಕ ಸಾಗಿ, ತಾಲ್ಲೂಕು ಪಂಚಾಯಿತಿ ಕಚೇರಿ ಮುಂಭಾಗದಲ್ಲಿ ಸಮಾವೇಶಗೊಂಡಿತು. ಈ ವೇಳೆ ಅಧಿಕಾರಿಗಳ ವಿರುದ್ಧ ಘೋಷಣೆಗಳನ್ನು ಕೂಗಿದ ಪ್ರತಿಭಟನಾಕಾರರು, ಸಮಸ್ಯೆಗಳನ್ನು ಆಲಿಸಲು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು (ಸಿಇಒ) ಸ್ಥಳಕ್ಕೆ ಆಗಮಿಸಬೇಕೆಂದು ಪಟ್ಟುಹಿಡಿದರು.

ಪ್ರತಿಭಟನಾ ಸ್ಥಳಕ್ಕೆ ಆಗಮಿಸುವಂತೆ ಒತ್ತಾಯಿಸಿದ ಹಿನ್ನೆಲೆಯಲ್ಲಿ ಸಿಇಒ ದೂರವಾಣಿ ಮೂಲಕ ರೈತ ಮುಖಂಡರೊಂದಿಗೆ ಮಾತನಾಡಿ, ಅ.28ರಂದು ರೈತ ಮುಖಂಡರು ಹಾಗೂ ಸಂಬಂಧಪಟ್ಟ ಅಧಿಕಾರಿಗಳ ಸಭೆ ನಡೆಸಿ ಕುಂದುಕೊರತೆಗಳನ್ನು ಆಲಿಸುವುದಾಗಿ ಭರವಸೆ ನೀಡಿದರು. ಬಳಿಕ ಪ್ರತಿಭಟನಾಕಾರರು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಕೆಂಚಪ್ಪ ಅವರಿಗೆ ಮನವಿ



ಸಲ್ಲಿಸಿ, ತಾತ್ಕಾಲಿಕವಾಗಿ ಪ್ರತಿಭಟನೆಯನ್ನು ಹಿಂಪಡೆದರು.

ಬರಪೀಡಿತ ತಾಲ್ಲೂಕಿನಲ್ಲಿ ಕುಡಿಯುವ ನೀರಿಗೂ ತತ್ವಾರ

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆಯ ಜಿಲ್ಲಾಧ್ಯಕ್ಷ ಗುಮ್ಮನೂರು ಬಸವರಾಜ ಮಾತನಾಡಿ, ತಾಲ್ಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಿಸಿ ತಿಂಗಳು ಕಳೆದರೂ ಜನರು ಮತ್ತು ಜಾನುವಾರುಗಳಿಗೆ ಸಮರ್ಪಕವಾಗಿ ಕುಡಿಯುವ ನೀರು ಪೂರೈಸಲಾಗುತ್ತಿಲ್ಲ ಎಂದು ಆರೋಪಿಸಿದರು.

ಗೋಶಾಲೆ ತೆರೆಯಲು ಈವರೆಗೂ ಸ್ಥಳ ಗುರುತಿಸಿಲ್ಲ. ಬೆಳೆನಷ್ಟದಿಂದ ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದು, ಬೆಳೆ ವಿಮೆ ಹಾಗೂ ಬೆಳೆ ಪರಿಹಾರ ಸಕಾಲದಲ್ಲಿ ದೊರೆಯುತ್ತಿಲ್ಲ. ಜಾನುವಾರುಗಳಿಗೆ ಮೇವು ಮತ್ತು ನೀರಿನ ಕೊರತೆ ಎದುರಾಗಿದ್ದು, ಹಸುಗಳನ್ನು ಸಾಕುವುದು ರೈತರಿಗೆ ಕಷ್ಟಕರವಾಗಿದೆ. ಉದ್ಯೋಗ ಖಾತ್ರಿ ಯೋಜನೆಯಡಿ ಸಮರ್ಪಕವಾಗಿ ಕೆಲಸ ನೀಡುತ್ತಿಲ್ಲ. ಈಗಾಗಲೇ ಕೆಲಸ ಮಾಡಿದ ಕಾರ್ಮಿಕರಿಗೂ ಕೂಲಿ ಹಣ ಪಾವತಿಯಾಗುತ್ತಿಲ್ಲ ಎಂದು ದೂರಿದರು.

ಗ್ರಾಮ ಪಂಚಾಯಿತಿಗಳಲ್ಲಿ ಅವ್ಯವಸ್ಥೆ

ನಿವೃತ್ತ ಶಿಕ್ಷಕ ಭರಮಸಮುದ್ರ ಮಂಜುನಾಥ ಮಾತನಾಡಿ, ಹನುಮಂತಾಪುರ ಗ್ರಾಮ ಪಂಚಾಯಿತಿಗೆ ಸುಸಜ್ಜಿತ ಕಟ್ಟಡವಿಲ್ಲದೆ ದಾಖಲೆಗಳು ಹಾಗೂ ಕಡತಗಳು ಎಲ್ಲೆಂದರಲ್ಲಿ ಬಿದ್ದಿವೆ. ತಾಲ್ಲೂಕಿನ ಹಲವು ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಚರಂಡಿಗಳ ಸ್ವಚ್ಛತೆ ಸಮರ್ಪಕವಾಗಿ ನಡೆಯುತ್ತಿಲ್ಲ. ಬೀದಿದೀಪ, ವಿದ್ಯುತ್ ಸೌಲಭ್ಯ ಹಾಗೂ ರಸ್ತೆ ಸೇರಿದಂತೆ ಮೂಲಸೌಕರ್ಯಗಳ ಕೊರತೆ ಇದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಗ್ರಾಮ ಪಂಚಾಯಿತಿ ಅಧಿಕಾರಿಗಳು ಸಾರ್ವಜನಿಕರಿಗೆ ಸುಲಭವಾಗಿ ಲಭ್ಯವಾಗುತ್ತಿಲ್ಲ. ದೂರವಾಣಿ ಕರೆಗಳಿಗೂ ಸ್ಪಂದಿಸದೆ, ಜನರ ಸಮಸ್ಯೆಗಳನ್ನು ಆಲಿಸುವಲ್ಲಿ ನಿರ್ಲಕ್ಷ್ಯ ವಹಿಸುತ್ತಿದ್ದಾರೆ ಎಂದು ಆರೋಪಿಸಿದರು.

ಹೋರಾಟ ಮುಂದುವರಿಸುವ ಎಚ್ಚರಿಕೆ

ರೈತ ಸಂಘದ ತಾಲ್ಲೂಕು ಅಧ್ಯಕ್ಷ ಕುಮಾರ ಮಾತನಾಡಿ, ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಳ್ಳಿಗಳಿಗೆ ಅಗತ್ಯ ಮೂಲಸೌಕರ್ಯಗಳನ್ನು ಸಕಾಲದಲ್ಲಿ ಒದಗಿಸದಿದ್ದರೆ ಹೋರಾಟವನ್ನು ಮುಂದುವರಿಸಲಾಗುವುದು ಎಂದು ಎಚ್ಚರಿಸಿದರು.

15ನೇ ಹಣಕಾಸು ಯೋಜನೆಯ ಅನುದಾನ ಬಿಡುಗಡೆಯಾಗುತ್ತಿಲ್ಲ ಎಂಬ ಕಾರಣ ಮುಂದಿಟ್ಟುಕೊಂಡು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು (ಪಿಡಿಒ) ಹಳ್ಳಿಗಳ ಮೂಲಸೌಕರ್ಯ ಅಭಿವೃದ್ಧಿಗೆ ಸೂಕ್ತ ಕ್ರಮ ಕೈಗೊಳ್ಳುತ್ತಿಲ್ಲ. ಈ ಬಗ್ಗೆ ಉನ್ನತ ಮಟ್ಟದ ಅಧಿಕಾರಿಗಳು ತಕ್ಷಣ ಗಮನಹರಿಸಿ ಗ್ರಾಮೀಣ ಜನರ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ವಕೀಲ ಆರ್. ಓಬಳೇಶ್, ರೈತ ಸಂಘದ ಮುಖಂಡರಾದ ಜಗದೀಶ್, ಸೂರಪ್ಪ, ಮಹಾಂತೇಶ್, ಈರಪ್ಪ, ಬೋರಯ್ಯ, ಚನ್ನಪ್ಪ, ಪಾನಾಯಕ, ತಿಪ್ಪೇಸ್ವಾಮಿ, ಗುಂಡಪ್ಪ, ಮಧು, ಕರಿಬಸಪ್ಪ, ಬಸವರಾಜ್ ಸೇರಿದಂತೆ ಇತರರು ಭಾಗವಹಿಸಿದ್ದರು.

ಬಿಸಿಎಂ(ಎ) ಸಮುದಾಯಕ್ಕೆ ರಾಜಕೀಯ ಪ್ರಾತಿನಿಧ್ಯ ಕಲ್ಪಿಸಲು ಆಗ್ರಹ

"ಮುಂಜಾನೆಯ ಮೆರಗು"

ಜಗಳೂರು ಅ, 18– ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಬಿಸಿಎಂ (ಎ) ಹಿಂದುಳಿದ ವರ್ಗಗಳ ಸಮುದಾಯಕ್ಕೆ ಸೂಕ್ತ ರಾಜಕೀಯ ಪ್ರಾತಿನಿಧ್ಯ ಕಲ್ಪಿಸುವಂತೆ ರಾಜಕೀಯ ಪಕ್ಷಗಳನ್ನು ಒತ್ತಾಯಿಸಲು ಅ.19ರಂದು ಬೆಳಿಗ್ಗೆ 11 ಗಂಟೆಗೆ ಜಗಳೂರಿನ ಬಯಲು ರಂಗ ಮಂದಿರದಲ್ಲಿ ಸಭೆ ಕರೆಯಲಾಗಿದೆ.

ಜಗಳೂರು ವಿಧಾನಸಭಾ ಕ್ಷೇತ್ರದಲ್ಲಿ ಹಿಂದುಳಿದ ವರ್ಗಗಳ ಸಮುದಾಯಗಳು ಸುಮಾರು ಶೇ.40ರಷ್ಟು ಮತದಾರರನ್ನು ಹೊಂದಿದ್ದರೂ, ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಸೂಕ್ತ ಪ್ರಾತಿನಿಧ್ಯ ದೊರೆಯುತ್ತಿಲ್ಲ ಎಂಬುದು ಸಮುದಾಯದ ಮುಖಂಡರ ಅಸಮಾಧಾನವಾಗಿದೆ.

ಸಾಮಾನ್ಯ ವರ್ಗಕ್ಕೆ ಮೀಸಲಾದ ಒಂದು ಜಿಲ್ಲಾ ಪಂಚಾಯಿತಿ ಕ್ಷೇತ್ರ ಹಾಗೂ ಎರಡು ತಾಲ್ಲೂಕು ಪಂಚಾಯಿತಿ ಕ್ಷೇತ್ರಗಳಲ್ಲಿ ಬಿಸಿಎಂ (ಎ) ಸಮುದಾಯದ ಅಭ್ಯರ್ಥಿಗಳಿಗೆ ರಾಜಕೀಯ ಪಕ್ಷಗಳು ಅವಕಾಶ ಕಲ್ಪಿಸಬೇಕು ಎಂದು ಒಕ್ಕೂಟ ಆಗ್ರಹಿಸಿದೆ.

ಈ ಹಿನ್ನೆಲೆಯಲ್ಲಿ ಸಮುದಾಯದ ಮುಖಂಡರು, ಯುವಕರು ಹಾಗೂ ಸಂಘ–ಸಂಸ್ಥೆಗಳ ಪ್ರತಿನಿಧಿಗಳು ಸಭೆಯಲ್ಲಿ ಭಾಗವಹಿಸಿ, ರಾಜಕೀಯ ಪ್ರಾತಿನಿಧ್ಯಕ್ಕಾಗಿ ಜಾಗೃತಿ ಮೂಡಿಸುವ ಹಾಗೂ ಮುಂದಿನ ಹೋರಾಟದ ರೂಪುರೇಷೆ ಸಿದ್ಧಪಡಿಸುವ ಕುರಿತು ಚರ್ಚಿಸಲಿದ್ದಾರೆ ಎಂದು ಬಿಸಿಎಂ (ಎ) ಸಮುದಾಯಗಳ ಒಕ್ಕೂಟ ತಿಳಿಸಿದೆ.

ಜಗಳೂರು ಗೊಲ್ಲರಹಟ್ಟಿಯಲ್ಲಿ ಆಂಜನೇಯ ಸ್ವಾಮಿ ಪೂಜೆಯಲ್ಲಿ ಕೆ.ಪಿ. ಪಾಲಯ್ಯ ಭಾಗಿ

"ಮುಂಜಾನೆಯ ಮೆರಗು"

ಜಗಳೂರು ಅ, 18– ತಾಲ್ಲೂಕಿನ ಗೊಲ್ಲರಹಟ್ಟಿ ಗ್ರಾಮದಲ್ಲಿ ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನದಲ್ಲಿ ನಡೆದ ವಿಶೇಷ ಪೂಜಾ ಕಾರ್ಯಕ್ರಮದಲ್ಲಿ ಕೆಪಿಸಿಸಿ ಎಸ್ಟಿ ವಿಭಾಗದ ಮಾಜಿ ರಾಜ್ಯಾಧ್ಯಕ್ಷ ಕೆ.ಪಿ. ಪಾಲಯ್ಯ ಅವರು ಪಾಲ್ಗೊಂಡು, ಸ್ವಾಮಿಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು.



ಈ ಸಂದರ್ಭದಲ್ಲಿ ದೇವರ ಆಶೀರ್ವಾದ ಪಡೆದು ನಾಡಿನ ಸುಭಿಕ್ಷೆ, ಗ್ರಾಮಸ್ಥರ ಸುಖ–ಸಮೃದ್ಧಿ ಹಾಗೂ ಜನರ ನೆಮ್ಮದಿಯ ಜೀವನಕ್ಕಾಗಿ ಪ್ರಾರ್ಥಿಸಿದರು.

ಗ್ರಾಮೀಣ ಭಾಗದ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸುವ ಮೂಲಕ ಸ್ಥಳೀಯ ಜನರೊಂದಿಗೆ ಆತ್ಮೀಯ ಸಂಬಂಧ ಹೊಂದಿರುವ ಕೆ.ಪಿ. ಪಾಲಯ್ಯ ಅವರು, ಗ್ರಾಮದ ಧಾರ್ಮಿಕ ಸಂಪ್ರದಾಯ ಮತ್ತು ಆಚರಣೆಗಳಿಗೆ ಗೌರವ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಗ್ರಾಮದ ಭಕ್ತಾದಿಗಳು, ಗ್ರಾಮಸ್ಥರು ಹಾಗೂ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

ಅನುಮತಿ ಇಲ್ಲದೆ ಸ್ಫೋಟಕ ಬಳಸಿ ಬಂಡೆ ಸ್ಫೋಟ
ಖಾಸಗಿ ಕಂಪನಿಯ ಗುತ್ತಿಗೆದಾರರು ಸೇರಿ ಹಲವರ ವಿರುದ್ಧ ಪ್ರಕರಣ ದಾಖಲು

"ಮುಂಜಾನೆಯ ಮೆರಗು"

ಜಗಳೂರು ಅ, 18– ತಾಲ್ಲೂಕಿನ ಬಂಗಾರಕ್ಕನಗುಡ್ಡ ಗ್ರಾಮದ ಸರ್ವೆ ನಂ.44ರ ಜಮೀನಿನಲ್ಲಿ ವಿದ್ಯುತ್ ಮಾರ್ಗದ ಕಾಮಗಾರಿಗೆ ಸಂಬಂಧಿಸಿದಂತೆ ಯಾವುದೇ ಪರವಾನಗಿ ಪಡೆಯದೆ ಸ್ಫೋಟಕ ವಸ್ತುಗಳನ್ನು ಬಳಸಿ ಕಲ್ಲುಬಂಡೆಗಳನ್ನು ಸ್ಫೋಟಿಸಿದ ಆರೋಪದ ಮೇರೆಗೆ ಖಾಸಗಿ ಕಂಪನಿಯ ಗುತ್ತಿಗೆದಾರರು ಸೇರಿದಂತೆ ಹಲವರ ವಿರುದ್ಧ ಜಗಳೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ತಾಲ್ಲೂಕಿನ ಬಂಗಾರಕ್ಕನಗುಡ್ಡ ಗ್ರಾಮದ ಜಮೀನಿನಲ್ಲಿ ಅ.17ರಂದು ಸಂಜೆ 4.30ರ ಸುಮಾರಿಗೆ ಈ ಘಟನೆ ನಡೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ರೆಸೋನಿಯಾ ಅನಂತಪುರ ಖಖ ಆರ್ಇಜೆಡ್ ಟ್ರಾನ್ಸ್‌ಮಿಷನ್ ಲಿಮಿಟೆಡ್ ಖಾಸಗಿ ಕಂಪನಿಗೆ ಸಂಬಂಧಿಸಿದವರು ವಿದ್ಯುತ್ ಮಾರ್ಗದ ಕಾಮಗಾರಿಗಾಗಿ ಕಲ್ಲುಬಂಡೆಗಳನ್ನು ಒಡೆಯಲು ಡ್ರಿಲ್ಲಿಂಗ್ ಮಾಡಿ, ಸ್ಫೋಟಕ ವಸ್ತುಗಳನ್ನು ಬಳಸಿ ಬ್ಲಾಸ್ಟಿಂಗ್ ನಡೆಸಿದ್ದಾರೆ. ಈ ಕಾರ್ಯಕ್ಕೆ ಸರ್ಕಾರದಿಂದ ಅಗತ್ಯ ಪರವಾನಗಿ ಪಡೆದಿರಲಿಲ್ಲ ಹಾಗೂ ಸಂಬಂಧಪಟ್ಟ ಜಮೀನಿನ ಮಾಲೀಕರ ಅನುಮತಿಯನ್ನೂ ಪಡೆದಿರಲಿಲ್ಲ ಎಂದು ದೂರಿನಲ್ಲಿ ಆರೋಪಿಸಲಾಗಿದೆ.

ಅನಧಿಕೃತವಾಗಿ ಸ್ಫೋಟಕ ವಸ್ತುಗಳನ್ನು ಬಳಸಿ ಬಂಡೆಗಳನ್ನು ಸ್ಫೋಟಿಸುವುದರಿಂದ ಕೃಷಿ ಜಮೀನಿಗೆ ಹಾನಿಯಾಗುವುದರ ಜತೆಗೆ ಸಾರ್ವಜನಿಕರ ಜೀವಕ್ಕೂ ಅಪಾಯ ಉಂಟಾಗುವ ಸಾಧ್ಯತೆಯಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಸ್ಥಳ ಪರಿಶೀಲಿಸಿದ ಪೊಲೀಸರು

ಅನಧಿಕೃತ ಬ್ಲಾಸ್ಟಿಂಗ್ ಕುರಿತು ಮಾಹಿತಿ ಲಭ್ಯವಾದ ಹಿನ್ನೆಲೆಯಲ್ಲಿ ಜಗಳೂರು ಪೊಲೀಸ್ ಠಾಣೆಯ ಹೆಡ್ ಕಾನ್‌ಸ್ಟೆಬಲ್ ಪಕ್ಷಣ್ಣ ಅವರು ಹೈವೇ ಮೊಬೈಲ್ ವಾಹನದ ಕರ್ತವ್ಯದಲ್ಲಿದ್ದ ಎಎಸ್‌ಐ ಶಿವಪ್ರಸಾದ್ ಎಚ್.ಆರ್. ಹಾಗೂ ಎಎಚ್‌ಸಿ ವಸಂತರೆಡ್ಡಿ ಅವರೊಂದಿಗೆ ಸ್ಥಳಕ್ಕೆ ತೆರಳಿ ಪರಿಶೀಲನೆ ನಡೆಸಿದ್ದಾರೆ.

ಈ ಸಂಬಂಧ ಗೋಗುಲ ಲಿಂಗಮಯ್ಯ (53), ವೆಂಕಟೇಶ, ರಾಜು ಹಾಗೂ ಇತರರ ವಿರುದ್ಧ ದೂರು ನೀಡಲಾಗಿದೆ. ಆರೋಪಿಗಳು ಸಂಬಂಧಪಟ್ಟ ಪರವಾನಗಿ ಪಡೆಯದೆ ಸ್ಫೋಟಕ ವಸ್ತುಗಳನ್ನು ಸ್ಥಳಕ್ಕೆ ತಂದು ಬಳಸಿದ್ದಾರೆ ಎಂದು ದೂರಿನಲ್ಲಿ ತಿಳಿಸಲಾಗಿದೆ.


ಘಟನೆಗೆ ಸಂಬಂದಿಸಿದಂತೆ ಜಗಳೂರು ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಹುಚ್ಚವ್ವನಹಳ್ಳಿ ದುರ್ಗಾದೇವಿಗೆ ವಿಶೇಷ ಪುಷ್ಪಾಲಂಕಾರ

"ಮುಂಜಾನೆಯ ಮೆರಗು"

ಜಗಳೂರು ಅ, 18– ತಾಲ್ಲೂಕಿನ ಹುಚ್ಚವ್ವನಹಳ್ಳಿ ಗ್ರಾಮದ ಆರಾಧ್ಯ ದೈವವಾದ ದುರ್ಗಾದೇವಿಗೆ ವಿಶೇಷ ಪುಷ್ಪಾಲಂಕಾರ ಮಾಡಲಾಗಿದ್ದು, ದೇವಿಯ ಅಲಂಕಾರ ಭಕ್ತರ ಗಮನ ಸೆಳೆಯಿತು.

ವಿವಿಧ ಬಗೆಯ ಬಣ್ಣಬಣ್ಣದ ಹೂವುಗಳಿಂದ ದೇವಿಯನ್ನು ವಿಶೇಷವಾಗಿ ಅಲಂಕರಿಸಲಾಗಿತ್ತು. ಹೂವಿನ ಅಲಂಕಾರದಿಂದ ದೇವಿಯ ಮೂರ್ತಿ ಕಂಗೊಳಿಸುತ್ತಿದ್ದು, ಭಕ್ತಿಭಾವದ ವಾತಾವರಣ ನಿರ್ಮಾಣವಾಗಿತ್ತು. ದೇವಿಯ ದರ್ಶನ ಪಡೆದ ಭಕ್ತರು ಭಕ್ತಿಯಿಂದ ಪೂಜೆ ಸಲ್ಲಿಸಿ, ತಮ್ಮ ಕುಟುಂಬಗಳ ಸುಖ, ಶಾಂತಿ, ನೆಮ್ಮದಿ ಹಾಗೂ ಸಮೃದ್ಧಿಗಾಗಿ ಪ್ರಾರ್ಥಿಸಿದರು. ಗ್ರಾಮದ ಜನರು ದುರ್ಗಾದೇವಿಯನ್ನು ಶ್ರದ್ಧೆ ಮತ್ತು ಭಕ್ತಿಯಿಂದ ಆರಾಧಿಸಿಕೊಂಡು ಬರುತ್ತಿದ್ದು, ಧಾರ್ಮಿಕ ಆಚರಣೆಗಳ



ಮೂಲಕ ಗ್ರಾಮದ ಸಂಪ್ರದಾಯ ಹಾಗೂ ಸಾಂಸ್ಕೃತಿಕ ಪರಂಪರೆಯನ್ನು ಮುಂದುವರಿಸಿಕೊಂಡು ಬಂದಿದ್ದಾರೆ. ದೇವಿಯ ವಿಶೇಷ ಅಲಂಕಾರವು ಭಕ್ತರಲ್ಲಿ ಸಂತಸ ಮೂಡಿಸಿತು.


ಕಾಂಗ್ರೆಸ್ ಸರ್ಕಾರದ ಜನಪರ ಯೋಜನೆಗಳೇ ಶ್ರೀರಕ್ಷೆ: ಎಂ.ಡಿ. ಕೀರ್ತಿಕುಮಾರ್
ಕಾಂಗ್ರೆಸ್ ಬೆಂಬಲಿಸುವಂತೆ ಪದವೀಧರ ಮತದಾರರಿಗೆ ಮನವಿ

"ಮುಂಜಾನೆಯ ಮೆರಗು"

ಜಗಳೂರು ಅ, 18– ಕಾಂಗ್ರೆಸ್ ಸರ್ಕಾರದ ಜನಪರ ಯೋಜನೆಗಳು ಹಾಗೂ ಜನಪರ ಆಡಳಿತವೇ ಪಕ್ಷಕ್ಕೆ ಶ್ರೀರಕ್ಷೆಯಾಗಿದ್ದು, ಸರ್ಕಾರದ ಅಭಿವೃದ್ಧಿ ಕಾರ್ಯಗಳನ್ನು ಮೆಚ್ಚಿರುವ ಪ್ರಜ್ಞಾವಂತ ಪದವೀಧರ ಮತದಾರರು ಮುಂಬರುವ ಆಗ್ನೇಯ ಪದವೀಧರ ಕ್ಷೇತ್ರದ ವಿಧಾನಪರಿಷತ್ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗೆ ತಮ್ಮ ಅಮೂಲ್ಯವಾದ ಮತವನ್ನು ನೀಡಲಿದ್ದಾರೆ ಎಂದು ಕೆಪಿಸಿಸಿ ಎಸ್‌ಟಿ ಘಟಕದ ಪ್ರಧಾನ ಕಾರ್ಯದರ್ಶಿ ಎಂ.ಡಿ. ಕೀರ್ತಿಕುಮಾರ್ ವಿಶ್ವಾಸ ವ್ಯಕ್ತಪಡಿಸಿದರು.

ತಾಲೂಕಿನ ಬಸನಕೋಟೆ ಗ್ರಾಮದಲ್ಲಿ ಭಾನುವಾರ ಆಗ್ನೇಯ ಪದವೀಧರ ಕ್ಷೇತ್ರದ ವಿಧಾನಪರಿಷತ್ ಚುನಾವಣೆಯ ಹಿನ್ನೆಲೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಶಶಿ ಹುಲಿಕುಂಟೆಮಠ ಅವರ ಪರವಾಗಿ ಮತಯಾಚಿಸಿ ಅವರು ಮಾತನಾಡಿದರು.

ಕಾಂಗ್ರೆಸ್ ಪಕ್ಷವು ಜನಸಾಮಾನ್ಯರ ಕಲ್ಯಾಣವನ್ನು ಮುಖ್ಯ ಉದ್ದೇಶವಾಗಿಟ್ಟುಕೊಂಡು ಆಡಳಿತ



ನಡೆಸುತ್ತಿದೆ. ಸಮಾಜದ ವಿವಿಧ ವರ್ಗಗಳ ಜನರ ಆರ್ಥಿಕ ಮತ್ತು ಸಾಮಾಜಿಕ ಪ್ರಗತಿಗೆ ಪೂರಕವಾದ ಯೋಜನೆಗಳನ್ನು ಜಾರಿಗೊಳಿಸುವ ಮೂಲಕ ಜನರ ವಿಶ್ವಾಸ ಗಳಿಸಿದೆ. ಸರ್ಕಾರದ ಜನಪರ ಕಾರ್ಯಕ್ರಮಗಳು ಹಾಗೂ ಅಭಿವೃದ್ಧಿಪರ ಚಿಂತನೆಗಳು ಪಕ್ಷದ ಬಲವನ್ನು ಹೆಚ್ಚಿಸಿವೆ ಎಂದು ತಿಳಿಸಿದರು.

ಪದವೀಧರ ಕ್ಷೇತ್ರದ ಚುನಾವಣೆ ಶಿಕ್ಷಣ ಪಡೆದ ಮತದಾರರ ಆಶಯಗಳು ಮತ್ತು ನಿರೀಕ್ಷೆಗಳನ್ನು ಪ್ರತಿನಿಧಿಸುವ ಮಹತ್ವದ ಚುನಾವಣೆಯಾಗಿದೆ. ಪದವೀಧರರ ಸಮಸ್ಯೆಗಳಿಗೆ ಸ್ಪಂದಿಸುವ, ಅವರ ಹಕ್ಕುಗಳು ಮತ್ತು ಬೇಡಿಕೆಗಳಿಗೆ ಸೂಕ್ತ ವೇದಿಕೆಯಲ್ಲಿ ಧ್ವನಿಯಾಗುವ ಅಭ್ಯರ್ಥಿಯನ್ನು ಆಯ್ಕೆ ಮಾಡುವುದು ಮತದಾರರ ಜವಾಬ್ದಾರಿಯಾಗಿದೆ. ಈ ನಿಟ್ಟಿನಲ್ಲಿ ಕಾಂಗ್ರೆಸ್ ಅಭ್ಯರ್ಥಿ ಶಶಿ ಹುಲಿಕುಂಟೆಮಠ ಅವರಿಗೆ ಬೆಂಬಲ ನೀಡುವ ಮೂಲಕ ಪಕ್ಷದ ಗೆಲುವಿಗೆ ಸಹಕರಿಸಬೇಕು ಎಂದು ಮನವಿ ಮಾಡಿದರು.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರತಿಯೊಂದು ಮತವೂ ಮಹತ್ವದ್ದಾಗಿದೆ. ಪದವೀಧರ ಮತದಾರರು ಚುನಾವಣೆಯಲ್ಲಿ ಸಕ್ರಿಯವಾಗಿ ಪಾಲ್ಗೊಂಡು ತಮ್ಮ ಮತದಾನದ ಹಕ್ಕನ್ನು ಸಮರ್ಥವಾಗಿ ಬಳಸಿಕೊಳ್ಳಬೇಕು. ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯನ್ನು ಗೆಲ್ಲಿಸುವ ಮೂಲಕ ಪಕ್ಷದ ಜನಪರ ನಿಲುವುಗಳಿಗೆ ಬೆಂಬಲ ನೀಡಬೇಕು ಎಂದು ಕೋರಿದರು.

ಈ ಸಂದರ್ಭದಲ್ಲಿ ಪದವೀಧರ ಮತದಾರರು, ಕಾಂಗ್ರೆಸ್ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದು, ಅಭ್ಯರ್ಥಿಯ ಪರವಾಗಿ ಮತಯಾಚನೆ ನಡೆಸಿದರು.

ದಾನ ಧರ್ಮದ ಮನೋಭಾವ ಬೆಳೆಸಿಕೊಳ್ಳಿ: ನಾಲ್ವಡಿ ಶಾಂತಲಿಂಗ ಶಿವಾಚಾರ್ಯ ಶ್ರೀಗಳು



"ಮುಂಜಾನೆಯ ಮೆರಗು"

ಜಗಳೂರು ಅ, 18– ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ದಾನ ಧರ್ಮ ಮಾಡುವ ಮನೋಭಾವ ಬೆಳೆಸಿಕೊಳ್ಳಬೇಕು. ಸಂಕಷ್ಟದಲ್ಲಿರುವವರಿಗೆ ನೆರವಾಗುವ ಮೂಲಕ ಮಾನವೀಯ ಮೌಲ್ಯಗಳನ್ನು ಎತ್ತಿಹಿಡಿಯಬೇಕು ಎಂದು ತಾಲೂಕಿನ ಕಣ್ವಕುಪ್ಪೆ ಗವಿಮಠದ ನಾಲ್ವಡಿ ಶಾಂತಲಿಂಗ ಶಿವಾಚಾರ್ಯ ಶ್ರೀಗಳು ಕರೆ ನೀಡಿದರು.

ತಾಲೂಕಿನ ಸಿದ್ದಮ್ಮನಹಳ್ಳಿ ಗ್ರಾಮದಲ್ಲಿ ಶನಿವಾರ 'ಶ್ರೀಗಳ ನಡೆ ಭಕ್ತರ ಮನೆ ಕಡೆ' ಎಂಬ ವಿನೂತನ ಪಾದಯಾತ್ರೆಯ ಅಂಗವಾಗಿ ಭಕ್ತರ ಮನೆಗಳಿಗೆ ಭೇಟಿ ನೀಡಿ, ಬಳಿಕ ಗ್ರಾಮಸ್ಥರನ್ನು ಉದ್ದೇಶಿಸಿ ಆಶೀ